MAA ಫ್ರೆಂಡ್ಸ್ ಸಾರಥ್ಯದಲ್ಲಿ...

www.yuvamarga.com Yuva Marga yuva_marga_

# ಯುವ ಮಾರ್ಗ

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 05 | ಸಂಚಿಕೆ: 89 | ಶುಕ್ರವಾರ : 23-01-2026 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 05 | ISSUE: 89 | FRIDAY : 23-01-2026 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಗೂಂಡಾಗಿರಿ, ಕರಾಳ ದಿನ: ಅಶೋಕ್


**ಬೆಂಗಳೂರು, ಜ. 22–** ಸದನದಲ್ಲಿ ರಾಜ್ಯಪಾಲರನ್ನು ತಡೆದು ಅಗೌರವ ತೋರಿ ಗುಂಡಾಗಿರಿ ನಡೆಸಲಾಗಿದೆ. ಇದೊಂದು ಕರಾಳ ದಿನ ಎಂದು ಬಿಜೆಪಿ ಟೀಕಿಸಿದೆ.

ವಿಧಾನಸಭೆಯ ಮೊಗಸಾಲೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಪ್ರತಿಪಕ್ಷ ನಾಯಕ ಆರ್. ಅಶೋಕ್, ವಿಧಾನಸಭೆಯ ವಿಶೇಷ ಅಧಿವೇಶನದಲ್ಲಿ ಭಾಷಣ ಮುಗಿಸಿ ಹೊರಟ ರಾಜ್ಯಪಾಲರನ್ನು ಕಾಂಗ್ರೆಸ್ ಸದಸ್ಯರು ಅಡ್ಡಗಟ್ಟಿರುವುದು ಖಂಡನೀಯ. ಇದೊಂದು ಕರಾಳ ದಿನ ಎಂದು ಬಣ್ಣಿಸಿದರು.

ಸಂವಿಧಾನದ ಪ್ರಕಾರ ರಾಜ್ಯಪಾಲರು ತಮ್ಮ ರ್ತವ್ಯ ನರ್ವಹಿಸಿ ಎಲ್ಲರಿಗೂ ಧನ್ಯವಾದ ಹೇಳಿ ಹೊರಟಿದ್ದಾರೆ. ಇದರಲ್ಲಿ ತಪ್ಪೇನಿದೆ. ರಾಜ್ಯಪಾಲರಿಗೆ ಭಾಷಣವನ್ನು ಓದದೆ ಸದನದಿಂದ ನರ್ಗಮಿಸುವ ಅಧಿಕಾರ ಇದೆ ಎಂದು ರಾಜ್ಯಪಾಲರ ನಡೆಯನ್ನು ಸರ್ಥಿಸಿಕೊಂಡರು.

ಕಾಂಗ್ರೆಸ್‌ನವರು ರಾಜ್ಯಪಾಲರನ್ನು ಅಡ್ಡಗಟ್ಟಿ ಅಗೌರವ ತೋರಿದ್ದು ಗುಂಡಾಗಿರಿ ಎಂದು ಅವರು ಕಿಡಿಕಾರಿದರು.

ರಾಜ್ಯಪಾಲರನ್ನು ಅಡ್ಡಗಟ್ಟಿ ಅಗೌರವ ತೋರಿದ ಸದಸ್ಯರನ್ನು ಸದನದಿಂದ ಹೊರ ಹಾಕಿ ಎಂದು ಆಗ್ರಹಿಸಿದ ಪ್ರತಿಪಕ್ಷ ನಾಯಕ ಆರ್. ಅಶೋಕ್,



ಈ ಸಂಬಂಧ ವಿಧಾನಸಭಾಧ್ಯಕ್ಷ ಯು.ಟಿ. ಖಾದರ್ ಅವರಿಗೆ ದೂರು ನೀಡುತ್ತೇವೆ ಎಂದು ಹೇಳಿದರು.ರಾಜ್ಯಪಾಲರನ್ನು ಟೀಕಿಸುತ್ತಿರುವ ಕಾಂಗ್ರೆಸ್ ನಡೆಯನ್ನು ತರಾಟೆಗೆ ತೆಗೆದುಕೊಂಡ ಅವರು, ರಾಜ್ಯಪಾಲರು ರ್ಕಾರದ ಹಲವು ಮಸೂದೆಗಳಿಗೆ ಸಹಿ ಹಾಕಿದ್ದಾರೆ. ಆಗ ರಾಜ್ಯಪಾಲರು ಸರಿ ಇದ್ದರಾ ಎಂದು ಪ್ರಶ್ನಿಸಿದರು.ಲೋಕಭವನವನ್ನು ಕಾಂಗ್ರೆಸ್ ಭವನವನ್ನಾಗಿಸಲು ಕಾಂಗ್ರೆಸ್ ರ್ಕಾರ ಹೊರಟಿದೆ. ಇದಕ್ಕೆ ನಾವು ಅವಕಾಶ ಕೊಡುವುದಿಲ್ಲ ಎಂದರು.ಕಾಂಗ್ರೆಸ್ ವರಿಷ್ಠರಾದ ರಾಹುಲ್‌ಗಾಂಧಿ ಮತ್ತು ಸೋನಿಯಾಗಾಂಧಿ ಅವರನ್ನು ಮೆಚ್ಚಿಸಲು ಕಾಂಗ್ರೆಸ್‌ನವರು ಸದನದಲ್ಲಿ ರಾಜ್ಯಪಾಲರನ್ನು ಅಡ್ಡಗಟ್ಟಿ ಅಗೌರವ ತೋರಿದ್ದಾರೆ ಎಂದು ಅಶೋಕ್ ದೂರಿದರು.

ರಾಜ್ಯಪಾಲರು ತಮ್ಮ ವಿವೇಚನಾಧಿಕಾರವನ್ನು ಬಳಸಿರುವುದು ಸಂಪರ್ಣವಾಗಿ ಸಂವಿಧಾನ ಸಮ್ಮತ ಇದನ್ನು ಪ್ರಶ್ನಿಸುವ ಕಾಂಗ್ರೆಸ್ ರ್ಕಾರ ಮೊದಲು ಸಂವಿಧಾನ ಓದಲಿ, ರ್ಥಮಾಡಿಕೊಳ್ಳಲಿ ಎಂದು ಹೇಳಿದರು.

## ಲಕ್ಷಾಂತರ ರೂ, ಮೌಲ್ಯದ ವಸ್ತುಗಳ ಕಳ್ಳತನ : ಆರೋಪಿ ಬಂಧನ

ಯುವಮಾರ್ಗ ಸುದ್ದಿ

**ಲಿಂಗಸುಗೂರು,ಜ.22–** ಬ್ಯಾಗನಲ್ಲಿದ್ದ ಬಂಗಾರದ ಸರ್, ಮೊಬೈಲ್, ಎರಡು ಸಾವಿರ ಹಣ ಸೇರಿ ಅಂದಾಜು ಲಕ್ಷಾಂತರ ಹಣ ಕಳವು ಮಾಡಿದ ಆರೋಪಿ ಕುಪ್ಪಣ್ಣ@ಅಮರೇಶ ತಂದೆ ಮಹಾದೇವಪ್ಪ (30) ಎಂದು ಗುರುತಿಸಲಾಗಿದ್ದು ಈತನನ್ನು ಪೋಲಿಸರು ಬಂಧಿಸಿದ್ದಾರೆ.

**ಪ್ರಕರಣದ ವಿವರಗಳು :**ದಿನಾಂಕ 20-01-2026 ರಂದು ಶ್ರೀ ರಂಗನಾಥ ಕುಲಕರ್ಣಿ ತಂದೆ ಕುಪ್ಪೆರಾವ್ ಜಾ, ಬ್ರಾಹ್ಮಣ

ಸಾಕೀನ್ ಕಸಬಾಲಿಂಗಸುಗೂರು ಠಾಣೆಗೆ ಹಾಜರಾಗಿ ಸಲ್ಲಿಸಿದ ಗಣಕೀಕೃತ ದೂರಿನ ಸಾರಾಂಶವಾಗಿದೆ. ದೂರಿನಲ್ಲಿ ಕಳ್ಳತನದ ಮಾಲು ಹಾಗೂ ಮುದ್ರೆಮಾಲುಗಳನ್ನು ತೆಗೆದುಕೊಂಡು ಹೋಗಿರುವ ಬಗ್ಗೆ ಹೇಳಲಾಗಿದೆ.

**ಘಟನೆಯ ವಿವರಣೆ :** ರಾತ್ರಿ 11:30 ಗಂಟೆಯಲ್ಲಿ ದಿನಾಂಕ 20-01-2026 ರಂದು ಬೆಳಿಗ್ಗೆ 6:00 ಗಂಟೆಯು ಮಧ್ಯದ ಅವಧಿಯುಲ್ಲಿ ಕಸಬಾಲಿಂಗಸುಗೂರು ಗ್ರಾಮದ ತಮ್ಮ ಸಂಬಂಧಿ ಶ್ರೀನಿವಾಸರವರ ಹೊಸ ಮನೆಯಲ್ಲಿ ಇಟ್ಟಿದ್ದ ಬ್ಯಾಗನಲ್ಲಿ ಇದ್ದ ತನ್ನ ಹೆಂಡತಿ ಒಂದು ಬಂಗಾರದ ಮಾಂಗ್ಯಲದ ಸರ 4 ತೊಲಿ 5 ಗ್ರಾಮ ಅಂದಾಜು



ಬೆಲೆ 6 ಲಕ್ಷದ 2000 ಸಾವಿರ ರೂಪಾಯಿ ಹಾಗೂ ಒಂದು ಸ್ಮಾರ್ಟ್ಫೋನ್ ಮೋಬೈಲ್ ಅಂದಾಜು ಬೆಲೆ 8000/ ರೂ ಅನ್ನು ಕಳ್ಳತನ ಮಾಡಿ ತೆಗೆದುಕೊಂಡು ಹೋಗಿದ್ದಾರೆ.

**ಪೊಲೀಸರ ಕ್ರಮ :** ಈ ಪ್ರಕರಣದಲ್ಲಿ ಕಳುವಾದ ಮಾಲು ಹಾಗೂ ಮುದ್ದೆಮಾಲು ತೆಗೆದುಕೊಂಡು ಹೋಗಿರುವ ಮಾನ್ಯ ಜಿಲ್ಲಾ ಪೊಲೀಸ್ ಅಧೀಕ್ಷಕರು ರಾಯಚೂರು 1, ಹೆಚ್ಚುವರಿ ಜಿಲ್ಲಾ ಪೊಲೀಸ್ ಅಧೀಕ್ಷಕರು ರಾಯಚೂರು 2, ಮಾನ್ಯ ಡಿಎಸ್ಪಿ. ಲಿಂಗಸುಗೂರವರ (2ನೇ ಪುಟಕ್ಕೆ>>>)

## ಚೆಕ್ ಡ್ಯಾಂ ಹಾಗೂ ಸಿ.ಸಿ ರಸ್ತೆ ಕಾಮಗಾರಿಗಳಲ್ಲಿ ಕಳಪೆ ಗುಣಮಟ್ಟ ಆರೋಪ ಅನುದಾನ ದುರುಪಯೋಗದ ಕುರಿತು ತನಿಖೆಗೆ ಜನಸೇವಾ ಫೌಂಡೇಶನ್ ಮನವಿ ಅಧಿಕಾರಿಗಳು, ಗುತ್ತಿಗೆದಾರರ ವಿರುದ್ಧ ಕ್ರಮಕ್ಕೆ ಒತ್ತಾಯ

ಯುವಮಾರ್ಗ ಸುದ್ದಿ

**ಮಾನ್ವಿ,ಜ.22–** ತಾಲ್ಲೂಕಿನ ಚೀಕಲಪರ್ವಿ ಗ್ರಾಮದಲ್ಲಿ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆ ಮೂಲಕ ಅನುಷ್ಠಾನಗೊಂಡಿರುವ ಚೆಕ್ ಡ್ಯಾಂ ಹಾಗೂ ಸಿ.ಸಿ ರಸ್ತೆ ಕಾಮಗಾರಿಗಳಲ್ಲಿ ತೀವ್ರ ಅಕ್ರಮಗಳು ಹಾಗೂ ಕಳಪೆ ಗುಣಮಟ್ಟ ಕಂಡುಬಂದಿರುವ ಹಿನ್ನೆಲೆಯಲ್ಲಿ, ಜನಸೇವಾ ಫೌಂಡೇಶನ್ ವತಿಯಿಂದ ತನಿಖೆ ನಡೆಸುವಂತೆ ಇಲಾಖೆಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಜನಸೇವಾ ಫೌಂಡೇಶನ್ ಮಾನ್ವಿ ತಾಲೂಕು ಅಧ್ಯಕ್ಷ ತಾಜುದ್ದೀನ್ ಚೀಕಲಪರ್ವಿ ಅವರು, ಗ್ರಾಮದಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಸುಮಾರು ರೂ.2 ಕೋಟಿ ಅನುದಾನದಲ್ಲಿ 2 ಚೆಕ್ ಡ್ಯಾಂಗಳಿಗೆ ಮಂಜೂರಾಗಿದ್ದರೂ, ವಾಸ್ತವದಲ್ಲಿ ಒಂದೇ ಚೆಕ್ ಡ್ಯಾಂ ಕಾಮಗಾರಿ ನಡೆದಿದ್ದು, ಮತ್ತೊಂದು ಚೆಕ್ ಡ್ಯಾಂ ಕಾಮಗಾರಿ ನಡೆಯದೇ ಇರುವ ಬಗ್ಗೆ ಗ್ರಾಮಸ್ಥರಲ್ಲಿ ಗಂಭೀರ ಅನುಮಾನಗಳು ಮೂಡಿವೆ.

ಅನುದಾನ ಬಿಡುಗಡೆ ಹಾಗೂ ಕಾಮಗಾರಿ ಸ್ಥಿತಿಗತಿಯ ಕುರಿತು ಸ್ಪಷ್ಟ ಮಾಹಿತಿ ಲಭ್ಯವಿಲ್ಲದಿರುವುದು ಸಾರ್ವಜನಿಕ ಹಣದ ದುರುಪಯೋಗಕ್ಕೆ ಸ್ಪಷ್ಟ ಸೂಚನೆಯಾಗಿದೆ ಎಂದು ಆರೋಪಿಸಿದರು.

ಅದೇ ರೀತಿ ಗ್ರಾಮದಲ್ಲಿ ನಿರ್ಮಾಣಗೊಂಡಿರುವ ಸಿ.ಸಿ ರಸ್ತೆಗಳಲ್ಲೂ ಅಗತ್ಯ ತಾಂತ್ರಿಕ ಮಾನದಂ



ಡಗಳನ್ನು ಪಾಲಿಸದೆ ಕಾಮಗಾರಿ ನಡೆಸಲಾಗಿದ್ದು, ರಸ್ತೆಗಳಲ್ಲಿ ಬಿರುಕುಗಳು ಕಾಣಿಸಿಕೊಂಡಿವೆ. ಕೆಲವೇ ದಿನಗಳಲ್ಲಿ ರಸ್ತೆಗಳು ಹಾಳಾಗುವ ಪರಿಸ್ಥಿತಿ ನಿರ್ಮಾಣವಾಗಿದ್ದು, ಗುಣಮಟ್ಟದ ಕೊರತೆಯಿಂದ ಗ್ರಾಮಸ್ಥರಿಗೆ ತೀವ್ರ ತೊಂದರೆ ಉಂಟಾಗಿದೆ ಎಂದು ತಿಳಿಸಿದರು.

ಈ ಎಲ್ಲಾ ಕಾಮಗಾರಿಗಳ ಕುರಿತು ತಕ್ಷಣವೇ ಸ್ಥಳ ಪರಿಶೀಲನೆ ನಡೆಸಿ, ಕಾಮಗಾರಿಗಳ ಗುಣಮಟ್ಟದ ತಾಂತ್ರಿಕ ತಪಾಸಣೆ ನಡೆಸಬೇಕು. ಅನುದಾನ ಬಳಕೆಯ ಕುರಿತು ಸಮಗ್ರ ತನಿಖೆ ನಡೆಸಿ, ಕಳಪೆ ಕಾಮಗಾರಿಗೆ ಕಾರಣರಾದ ಅಧಿಕಾರಿಗಳು ಹಾಗೂ ಗುತ್ತಿಗೆದಾರರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು. ಜೊತೆಗೆ ಮಾನದಂಡದಂತೆ ಮರುಕಾಮಗಾರಿ ಕೈಗೊಳ್ಳುವಂತೆ ಸೂಕ್ತ ಆದೇಶ ನೀಡಬೇಕೆಂದು ಅವರು ಒತ್ತಾಯಿಸಿದರು. ಜನರ ಹಣ ಜನರ ಹಿತಕ್ಕಾಗಿ ಬಳಸಲ್ಪಡಬೇಕು ಎಂಬ ಉದ್ದೇಶದಿಂದ ಈ ಮನವಿಯನ್ನು ಸಲ್ಲಿಸಲಾಗಿದ್ದು, ನ್ಯಾಯ ಒದಗಿಸುವಲ್ಲಿ ಸಂಬಂಧಿಸಿದ ಅಧಿಕಾರಿಗಳು ತ್ವರಿತ ಕ್ರಮ ಕೈಗೊಳ್ಳಬೇಕೆಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ತಾಲೂಕು ಸಂಘಟನಾ ಕಾರ್ಯದರ್ಶಿ ಸಿದ್ದಾರೆಡ್ಡಿ, ಸಿದ್ದಪ್ಪ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ರಾಯಚೂರು ಉತ್ಸವ: ಫೆಬ್ರವರಿ 4ರಿಂದ ಹೆಲಿಕ್ಯಾಪ್ಟರ್ ರೈಡ್

**ರಾಯಚೂರು,ಜ.22–** ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ರಾಯಚೂರು ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ-2026ರ ಅಂಗವಾಗಿ ಫೆಬ್ರವರಿ 4ರಿಂದ 9ರವರೆಗೆ ರಾಯಚೂರು ಜಿಲ್ಲೆಯ ನಾಗರೀಕರಿಗೆ ಬಾನಂಗಳದಿಂದ ರಾಯಚೂರು ವೀಕ್ಷಣೆಗೆ ರಾಯಚೂರು ಬೈಸ್ಕಯ್ ಎಂಬ ವಿಶೇಷ ಹೆಲಿಕ್ಯಾಪ್ಟರ್ ರೈಡ್ ಕಾರ್ಯಕ್ರಮವನ್ನು ನಗರದ ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಹೆಲಿಕ್ಯಾಪ್ಟರ್ ರೈಡ್ ಕಾರ್ಯಕ್ರಮವು ಫೆಬ್ರವರಿ 4ರಿಂದ 9ರವರೆಗೆ ಪ್ರತಿ ದಿನ ಬೆಳಗ್ಗೆ 8 ರಿಂದ ಮಧ್ಯಾಹ್ನ 12 ಗಂಟೆವರೆಗೆ ಹಾಗೂ ಮಧ್ಯಾಹ್ನ 12.30 ರಿಂದ ಸಂಜೆ 4.30ರವರೆಗೆ ಇರುತ್ತದೆ. ಪ್ರತಿಯೊಬ್ಬರಿಗೆ 3,500 ರೂ. ಶುಲ್ಕ ಇರುತ್ತದೆ. 2 ವರ್ಷದೊಳಗಿನ ಮಕ್ಕಳಿಗೆ ಉಚಿತವಾಗಿರುತ್ತದೆ.

ಆನ್‌ಲೈನ್ ಟಿಕೇಟ್ ಬುಕ್ಕಿಂಗ್‌ಗೆ ವೆಬ್‌ಸೈಟ್ ವಿಳಾಸ: www.helitaxii.com CxÀªÁ https://share.google/




cEDrwhwrhJdOvBFYK ಮೂಲಕ ಮಾಡಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಆಫ್‌ಲೈನ್ ಟಿಕೇಟ್‌ಗಾಗಿ ಮೊಬೈಲ್ ಸಂಖ್ಯೆ: 9482565016, 9448527188, 9611112356, 7676522104, 6362238100ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಅಪರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೃಹತ್ ಉದ್ಯೋಗ ಮೇಳದಲ್ಲಿ ಪಾಲ್ಗೊಳ್ಳಲು ಅವಕಾಶ

ಯುವಮಾರ್ಗ ಸುದ್ದಿ

**ರಾಯಚೂರು,ಜ.22–** ಉತ್ತರ ಕರ್ನಾಟಕ ಭಾಗದ ಯುವನಿಧಿ ಫಲಾನುಭವಿಗಳಿಗೆ ಹಾಗೂ ವಿವಧ ಕ್ಷೇತ್ರಗಳಲ್ಲಿ ವಿದ್ಯಾರ್ಹತೆಯನ್ನು ಹೊಂದಿರುವ ನಿರುದ್ಯೋಗ ಯುವಕ-ಯುವತಿಯರಿಗೆ ಉದ್ಯೋಗ ಕಲ್ಪಿಸುವ ಉದ್ದೇಶದಿಂದ ಕರ್ನಾಟಕ ಸರ್ಕಾರದ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಹಾಗೂ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖಾ ಸಚಿವರ ನೇತೃತ್ವದಲ್ಲಿ ವಿಜಯಪುರ ನಗರದ ಸ್ಟೇಷನ್ ರಸ್ತೆಯಲ್ಲಿನ ದರಬಾರ ಸ್ಕೂಲ್ ಆವರಣದಲ್ಲಿ ಫೆಬ್ರವರಿ 2ರ ಬೆಳಿಗ್ಗೆ 9 ಗಂಟೆಯಿಂದ ಸಂಜೆ 5 ಗಂಟೆವರೆಗೆ ಉದ್ಯೋಗ ಮೇಳವನ್ನು ಹಮ್ಮಿಕೊಳ್ಳಲಾಗಿದೆ.

ಈ ಯುವ ಸಮೃದ್ಧಿ ಹಾಗೂ ಉದ್ಯೋಗ ಮೇಳದಲ್ಲಿ ಕಲ್ಯಾಣ ಕರ್ನಾಟಕ ವಿಭಾಗೀಯ ಭಾಗದ ಜಿಲ್ಲೆಗಳ ಅಭ್ಯರ್ಥಿಗಳನ್ನು ಒಳಗೊಂಡಂತೆ ಇತರೆ ಜಿಲ್ಲೆಗಳಿಂದಲೂ ಸಹ ಅಂದಾಜು 20,000 ಕ್ಕೂ ಅಧಿಕ ಅಭ್ಯರ್ಥಿಗಳು, 150ಕ್ಕೂ ಹೆಚ್ಚು ಅಧಿಕ ಕಂಪನಿಗಳು ಭಾಗವಹಿಸುವ ನಿರೀಕ್ಷೆಯಿದ್ದು, ಈ




ಉದ್ಯೋಗ ಮೇಳದಲ್ಲಿ ಎಸ್ಸೆಸ್ಸೆಲ್ಸಿ, ಪಿಯುಸಿ, ಐಟಿಐ, ಡಿಪ್ಲೋಮಾ, ಇಂಜಿನಿಯರಿಂಗ್ ಹಾಗೂ ಯಾವುದೇ ಪದವಿ ವಿದ್ಯಾರ್ಹತೆ ಹೊಂದಿರುವ ಜಿಲ್ಲೆಯ ನಿರುದ್ಯೋಗ ಯುವಕ/ ಯುವತಿಯರು ವಿಭಾಗೀಯ ಉದ್ಯೋಗ ಮೇಳದಲ್ಲಿ ಭಾಗವಹಿಸಬಹುದು.

ಈ ಉದ್ಯೋಗ ಮೇಳವು ಉದ್ಯೋಗಾಕಾಂಕ್ಷಿಗಳನ್ನು ಹಾಗೂ ಉದ್ಯೋಗದಾತರನ್ನು ಒಂದೇ ವೇದಿಕೆಯಡಿ ತರುವ ಪ್ರಯತ್ನವಾಗಿದೆ. ಉದ್ಯೋಗದಾತರು ಈ ಉದ್ಯೋಗ ಮೇಳದಲ್ಲಿ ಭಾಗವಹಿಸಿ ಅವರ ಸಂಸ್ಥೆಗಳಲ್ಲಿ ಖಾಲಿ ಇರುವ ವಿವಿಧ ಉದ್ಯೋಗಗಳಿಗೆ ಅರ್ಹ ಉದ್ಯೋಗಾಕಾಂಕ್ಷಿಗಳನ್ನು ಆಯ್ಕೆ ಮಾಡಿಕೊಳ್ಳಲಿದ್ದಾರೆ ಹಾಗೆಯೇ ಉದ್ಯೋಗಾಕಾಂಕ್ಷಿ ಯುವಕ/ಯುವತಿಯರು ತಮ್ಮ ಕೌಶಲ್ಯಕ್ಕೆ ಅನುಗುಣವಾಗಿ ಉದ್ಯೋಗವನ್ನು ಆಯ್ಕೆ ಮಾಡಿಕೊಳ್ಳಲು ಅವಕಾಶವಿರುತ್ತದೆ.

ಈ ಉದ್ಯೋಗ ಮೇಳದಲ್ಲಿ ಭಾಗವಹಿಸಲು ಇಚ್ಛಿಸುವ ಉದ್ಯೋಗಾಕಾಂಕ್ಷಿಗಳು ಜಾಲತಾಣ hhttps://udyogamela. ksdckarnata ka.com ನಲ್ಲಿ ಆನ್‌ಲೈನ್ ಮೂಲಕ ನೋಂದಾಯಿಸಿಕೊಂಡು ಭಾಗವಹಿಸ ಬಹುದಾಗಿರುತ್ತದೆ. ಹಾಗೂ ಈ ಉದ್ಯೋಗ ಮೇಳದಲ್ಲಿ ಭಾಗವಹಿಸಲು ಇಚ್ಛಿಸುವ ಉದ್ಯೋಗ ದಾತರು/ ಕಂಪನಿಗಳು ಸಹ ತಮ್ಮಲ್ಲಿ ಲಭ್ಯವಿರುವ ಖಾಲಿ ಹುದ್ದೆಗಳ ವಿವರಗಳೊಂದಿಗೆ hhttps:// employer.ksdckarnataka.com/ login ಈ ಜಾಲತಾಣದಲ್ಲಿ ನೋಂದಾಯಿಸಿಕೊಂಡು ಉದ್ಯೋಗ ಮೇಳದಲ್ಲಿ ಭಾಗವಹಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ: 9606494308ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಜಿ.ಯು. ಹುಡೇದ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಉಚಿತ ಆರೋಗ್ಯ ತಪಾಸಣೆಗೆ ಚಾಲನೆ : ದಂತ ಭಾಗ್ಯ ಯೋಜನೆ ಸದ್ಬಳಕೆ ಮಾಡಿಕೊಳ್ಳಿ ಡಾ.ನಾಗವೇಣ




ಯುವಮಾರ್ಗ ಸುದ್ದಿ

**ಮಸ್ಕಿ,ಜ.22–** ಗುಡದೂರು ಗ್ರಾಮದಲ್ಲಿ ರಾಯಚೂರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರ ಬಳಗನೂರು ಮತ್ತು ಪಿಪಿಎಚ್‌ಎಫ್, ಪ್ರಣಾ ಯೋಜನೆಯ ಜಿಇ ಹೆಲ್ತ್‌ಕೇರ್ ಸಂಯುಕ್ತಾಶ್ರಯದಲ್ಲಿ ಉಚಿತ ಮಹಿಳಾ ಆರೋಗ್ಯ ತಪಾಸಣಾ ಶಿಬಿರವನ್ನು ದಂತ ವೈದ್ಯರು ನಾಗವೇಣಿ ಉದ್ಘಾಟಿಸಿ ಮಾತನಾಡಿದರು.

ಗ್ರಾಮೀಣ ಜನರಿಗೆ ಸರ್ಕಾರದ ಯೋಜನೆ ಸದುಪಾಯೋಗ ಮಾಡಿಕೊಳ್ಳಲು ಜಾಗೃತಿ ಮೂಡಿಸಲು ಉಚಿತ ತಪಾಸಣೆಯೊಂದಿಗೆ ಪಿಪಿಹೆಚ್‌ಎಫ್ ಜಿಇ ಸಂಸ್ಥೆಯು ಸರ್ಕಾರಿ ಆಸ್ಪತ್ರೆಯೊಂದಿಗೆ ಸರ್ಕಾರದ ಯೋಜನೆಗಳ ಸೇವೆಯನ್ನ ಸಾರ್ವಜನಿಕರು ಬಳಸಿಕೊಳ್ಳಲು ಕೈಜೋಡಿಸುತ್ತಿದೆ. ಗ್ರಾಮದ ಜನರು ಉತ್ತಮ ಆರೋಗ್ಯದಿಂದರಲು ಆಹಾರ ಸೇವನೆಗೆ ಹಲ್ಲುಗಳು ಕೂಡ ಪ್ರಮುಖವಾದದ್ದು. ಪ್ರತಿಯೊಬ್ಬರು ಬಾಯಿ ಸ್ವಚ್ಛವಾಗಿಟ್ಟುಕೊಳ್ಳಲು ನಿತ್ಯವು ಸ್ವಚ್ಛವಾಗಿ ತೊಳೆಯಬೇಕು. ಹಲ್ಲುಗಳ ಸಮಸ್ಯೆಯನ್ನ ಪರಿಹರಿಸಿಕೊಳ್ಳಲು ಸರ್ಕಾರವು ದಂತಭಾಗ್ಯ ಯೋಜನೆಯಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿ ಹಲ್ಲುಗಳನ್ನ ಹಾಕಲಾಗುತ್ತದೆ. ಆದ್ದರಿಂದ ಸಮಸ್ಯೆಯನ್ನ ತಪ್ಪದೇ ತಪಾಸಣೆ ಮಾಡಿಕೊಂಡು ಸರ್ಕಾರದ ಯೋಜನೆಯನ್ನ ಸದುಪಾಯೋಗ ಮಾಡಿಕೊಳ್ಳಲು ಹೇಳಿದರು.

ನಂತರ ಗುಡದೂರು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಕೃಷ್ಣ ಅವರು ಮಾತನಾಡಿ ಆಧುನಿಕ ಜೀವನ ಪದ್ದತಿಯ ಆಹಾರ ಪದ್ದತಿಯನ್ನ ಬಿಟ್ಟು ಹಳೆಯ ಕಾಲದ ಆಹಾರ ಪದ್ದತಿಯನ್ನ ರೂಡಿಸಿಕೊಳ್ಳುವುದು ಅವಶ್ಯಕತೆಯಿದೆ. ಅತಿ ಸಣ್ಣ ವಯಸ್ಸಿನವರಿಗೆ ಹೃದಯ ಸಂಬಂಧಿ ಕಾಯಿಲೆಯಿಂದ ಮೃತಪಟ್ಟವರನ್ನ ಕಾಣುತ್ತಿದೆ. ಇತ್ತಿಚ್ಚಿಗೆ ಚಿಕ್ಕ ವಯಸ್ಸಲ್ಲಿ ಬಿಪಿ ಶುಗರ್ ಅಧಿಕ ರಕ್ತದೊತ್ತಡ ಸಮಸ್ಯೆ ಸಹಜವಾಗಿದೆ. ಇದಕ್ಕೆಲ್ಲ ಕಾರಣ ಆಹಾರ ಸೇವನೆ ಪ್ರಮುಮುಖ ಕಾರಣ. ಇಂತಹ ಉಚಿತ ಆರೋಗ್ಯ ತಪಾಸಣೆಗಳಲ್ಲಿ ಸದುಪಾಯೋಗ ಮಾಡಿಕೊಂಡು (2ನೇ ಪುಟಕ್ಕೆ>>>)

# ಮೊದಲನೇಯ ಪುಟದಿಂದ

## ಉಚಿತ ಆರೋಗ್ಯ ತಪಾಸಣೆಗೆ ಚಾಲನೆ : ದಂತ ಭಾಗ್ಯ ಯೋಜನೆ ಸದ್ಬಳಕೆ ಮಾಡಿಕೊಳ್ಳಿ ಡಾ.ನಾಗವೇಣಿ

ಆರೋಗ್ಯದಿಂದರಲು ಹೇಳಿದರು. ಈ ಕಾರ್ಯಕ್ರಮದಲ್ಲಿ ಮಲ್ಲೈಕಾ ಅಮೀನ ಪೀಪಲ್ ಟು ಪೀಪಲ್ ಸಂಸ್ಥೆಯ ಪ್ರೋಗ್ರಾಮ್ ಮ್ಯಾನೇಜರ್ ಪ್ರಸ್ತಾವಿಕ ಮಾತನಾಡಿ ಕಳೇದ ಒಂದುವರೆ ವರ್ಷದಿಂದ ನಮ್ಮ ಸಂಸ್ಥೆಯು ಉಚಿತವಾಗಿ ಗರ್ಭಗಂಠ ಕ್ಯಾನ್ಸರ್ ಹಾಗೂ ಸ್ತನ ಕ್ಯಾನ್ಸರ್ ಅಧಿಕ ರಕ್ತದ ಒತ್ತಡ ಎತ್ತರ ತೂಕ ಹಾಗೂ ಬಿಪಿ ಶುಗರ್ ತಪಾಸಣೆ, ಕಣ್ಣು ತಪಾಸಣೆ, ಬಾಯಿ ಮತ್ತು ಹಲ್ಲು ತಪಾಸಣೆ, ಉಚಿತ ಆಭಾ ಕಾರ್ಡ ನೊಂದಣಿ ಮಾಡುತ್ತಿದ್ದೇವೆ ಮತ್ತು ಪೌಷ್ಟಿಕ ಆಹಾರ ಸೇವನೆ ಕುರಿತು ಉಚಿತವಾಗಿ ನೀಡುತಿದ್ದೇವೆ ಎಂದು ತಿಳಿಸಿದರು.

ನಂತರ ಫಾಸ್ಟ್‌ಫುಡ್ ದುಷ್ಪರಿಣಾಮ ಕುರಿತು ಪ್ರೋಜೆಕ್ಟರ್ ಮೂಲಕ ಗ್ರಾಮಸ್ಥರಿಗೆ ಬಿತ್ತರಿಸಿದರು. ಈ ಸಂದರ್ಭದಲ್ಲಿ ಡಾ.ಸುನೀಲ್,ಗ್ರಾಮ ಪಂಚಾಯಿತಿ ಅಬಿವೃದ್ದಿ ಅಧಿಕಾರಿ ಕೃಷ್ಣ , ಮಲ್ಲೈಕಾ ಅಮೀನ್,ಮಹಿಳಾ ವೈದ್ಯರು ಡಾ. ಸುನಿತಾ ,ದಂತ ವೈದ್ಯರು ಡಾ. ನಾಗವೇಣಿ, ರಾಮಾಂಜನ್ ಆಹಾರ ಪದ್ದತಿ ಆಪ್ತಸಮಾಲೋಚಕರು, ಗ್ರಾಮದ ಮುಖಂಡರು ಬಸವರಾಜಪ್ಪ ಗೌಡ,ತಿರುಪತಿ ಮಿಲ್ಟರಿ,ಚನ್ನಬಸಯ್ಯಸ್ವಾಮಿ ನೀವೃತ್ತ ಶಿಕ್ಷಕರು,ಹಾಗೂ ಕಣ್ಣು ತಜ್ಞರು ಪಿಪಿಹೆಚ್‌ಎಫ್ ಸಿಬ್ಬಂಧಿ ಹನುಮಂತ , ತನುಜಾ,ಸಾನಿಯಾ ಆಶಾ ಕಾರ್ಯಕರ್ತರು ಗ್ರಾಮಸ್ಥರು ಸ್ವಯಂ ಸೇವಕರು ಇದ್ದರು.

## ಲಕ್ಷಾಂತರ ರೂ, ಮೌಲ್ಯದ ವಸ್ತುಗಳ ಕಳ್ಳತನ : ಆರೋಪಿ ಬಂಧನ

ಮಾರ್ಗದರ್ಶನದಲ್ಲಿ ಲಿಂಗಸುಗೂರ ಪೊಲೀಸ್ ಠಾಣೆಯ ಹೊಸಕೇರಪ್ಪ ಪೊಲೀಸ್ ಇನ್ಸ್‌ಪೆಕ್ಟರ್ ಲಿಂಗಸುಗೂರು ಪೊಲೀಸ್ ಠಾಣೆಯವರ ನೇತೃತ್ವದಲ್ಲಿ ತಂಡವನ್ನು ರಚನೆ ಮಾಡಲಾಗಿದೆ.

**ತನಿಖೆಯ ಸ್ಥಿತಿ:** ದಿನಾಂಕ 21-1-2026 ರಂದು ಹೋಸ್ಕೇರಪ್ಪ ಪೊಲೀಸ್ ಇನ್ಸ್‌ಪೆಕ್ಟರ್ ರವರು ರಾತ್ರಿ ಪೊಲೀಸ್ ಸಿಬ್ಬಂದಿಗಳಾದ ಈರಣ್ಣ, ಸಿದ್ದಪ್ಪ, ಸೋಮು, ಭೀಮಣ್ಣ, ಬಸವರಾಜರವರೊಂದಿಗೆ ಸೇರಿಕೊಂಡು ಪತ್ತೆ ಕಾರ್ಯವನ್ನು ಕೈಗೊಂಡು ಬೆಳಿಗ್ಗೆ 11-05 ಗಂಟೆಗೆ ಲಿಂಗಸುಗೂರು ಪಟ್ಟಣದ ಐಬಿ ಹತ್ತಿರ ಲಿಂಗಸಗೂರು ಮುದಗಲ್ ರಸ್ತೆ ಪಕ್ಕದಲ್ಲಿ ಸಂಶಯಾಸ್ಪದ ವ್ಯಕ್ತಿಯನ್ನು ವಶಕ್ಕೆ ಪಡೆದುಕೊಂಡು ಆತನನ್ನು ಪೊಲೀಸ್ ಠಾಣೆಗೆ ಕರೆತಂದು ವಿಚಾರಿಸಿದಾಗ ತಾನು ಮಾಡಿದ ಅಪರಾಧವನ್ನು ಒಪ್ಪಿಕೊಂಡಿದ್ದು.

ಆರೋಪಿಯ ವಿವರಗಳು : ಆರೋಪಿಯಿಂದ ಕಳ್ಳತನ ಮಾಡಿದ 4 ತೊಲಿ 6 ಗ್ರಾಮ ಬಂಗಾರದ ಮಾಂಗ್ಯಲದ ಸರ ಅಂದಾಜು ಬೆಲೆ 6 ಲಕ್ಷದ 2 ಸಾವಿರ ರೂಪಾಯಿ ಹಾಗೂ ಒಂದು ಸ್ಮಾರ್ಟ್‌ಫೋನ್ ಮೋಬೈಲ್ ಅಂದಾಜು ಬೆಲೆ 8000/ ರೂ ಅನ್ನು ಒಟ್ಟು 6 ಲಕ್ಷದ 10 ಸಾವಿರ ರೂಪಾಯಿ ಬೆಲೆಯುಳ್ಳ ಕೃತ್ಯಕ್ಕೆ ಸಂಬಂಧಿಸಿದ ಬಂಗಾರ ಆಭರಣ ಹಾಗೂ ಮೋಬೈಲ್ ಜಪ್ತಿ ಮಾಡಿಕೊಂಡು ಆರೋಪಿತನನ್ನು ದಸ್ತಗಿರಿ ಮಾಡಿ ನ್ಯಾಯಾಂಗ ಬಂಧನಕ್ಕೆ ಕಳುಹಿಸಿಕೊಟ್ಟಿದ್ದು.

ಈ ಪ್ರಕರಣದಲ್ಲಿ ಪತ್ತೆ ಕಾರ್ಯವನ್ನು ಕೈಗೊಂಡ ಲಿಂಗಸುಗೂರು ಪೊಲೀಸ್ ಠಾಣೆ ಪೊಲೀಸ್ ಅಧಿಕಾರಿ ಹಾಗೂ ಸಿಬ್ಬಂದಿಗಳ ಕಾರ್ಯವನ್ನು ಶ್ಲಾಘಿಸಿ ಬಹುಮಾನವನ್ನು ಘೋಷಣೆ ಮಾಡಲಾಗಿದೆ.

## ವಿಜ್ಞಾನ ವಸ್ತು ಪ್ರದರ್ಶನ ಹಾಗೂ ಆವಿಷ್ಕಾರ ಮೇಳ: ವಿಜೃಂಭಣೆಯಿಂದ ಯಶಸ್ವಿ ಆಯೋಜನೆ



**ಗುರುಮಠಕಲ್:ಜ.22:** ಸಮಗ್ರ ಶಿಕ್ಷಣ ಕರ್ನಾಟಕ, ಕಲ್ಯಾಣ ಕರ್ನಾಟಕ ಮಾನವ ಸಂಪನ್ಮೂಲ ಕೃಷಿ ಹಾಗೂ ಸಂಸ್ಕೃತಿಕ ಸಂಘ (ರಿ) ಹಾಗೂ ಅಗಸ್ತ್ಯ ಅಂತರಾಷ್ಟ್ರೀಯ ಪ್ರತಿಷ್ಠಾನ ಇವರ ಆಶ್ರಯದಲ್ಲಿ, ಮಿನಿ ನಾವಿನ್ಯತೆ ಕೇಂದ್ರದ ಸಹಯೋಗದೊಂದಿಗೆ ಸರ್ಕಾರಿ ಪದವಿ ಪೂರ್ವ ಕಾಲೇಜು (ಪ್ರೌಢ ವಿಭಾಗ), ಗುರುಮಠಕಲ್ ಶಾಲೆಯಲ್ಲಿ ಜನವರಿ 21-2026 ರಂದು ವಿಜ್ಞಾನ ವಸ್ತು ಪ್ರದರ್ಶನ ಹಾಗೂ ಆವಿಷ್ಕಾರ ಮೇಳವನ್ನು ವಿಜೃಂಭಣೆಯಿಂದ ಹಾಗೂ ಯಶಸ್ವಿಯಾಗಿ ಆಯೋಜಿಸಲಾಯಿತು. ಈ ಮೇಳವನ್ನು ಸುಮಾರು 500 ರಿಂದ 700 ವಿದ್ಯಾರ್ಥಿಗಳು ವೀಕ್ಷಿಸಿದರು. ಕಾರ್ಯಕ್ರಮದಲ್ಲಿ 40 ರಿಂದ 50 ವಿಜ್ಞಾನ ಮಾದರಿಗಳು ಹಾಗೂ 15 ರಿಂದ 25 ಆವಿಷ್ಕಾರ ಮಾದರಿಗಳು ಪ್ರದರ್ಶನಕ್ಕೆ ಇಡಲಾಗಿದ್ದು, ವಿದ್ಯಾರ್ಥಿಗಳ ವೈಜ್ಞಾನಿಕ ಚಿಂತನೆ, ಸೃಜನಶೀಲತೆ ಮತ್ತು ನವೀನತೆ ಸ್ಪಷ್ಟವಾಗಿ ಪ್ರತಿಬಿಂಬಿಸಿತು. ಈ ವಿಜ್ಞಾನ ವಸ್ತು ಪ್ರದರ್ಶನ ಹಾಗೂ ಆವಿಷ್ಕಾರ ಮೇಳವನ್ನು ಗುರುಮಠಕಲ್ ತಾಲೂಕಿನ ವಿವಿಧ ಸ್ಥಳೀಯ ಶಾಲೆಗಳಾದ ಬಾಲಕಿಯರ ಸರ್ಕಾರಿ ಮಾದರಿ ಶಾಲೆ, ಗುರುಮಠಕಲ್, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಕಾಕಲವಾರ ಬೇಸ್, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಕಟ್ಟಲಗೇರಾ, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಮಲ್ಲಯ್ಯಕಟ್ಟ, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಹರಿಜನ್ವಾಡ, ಒಐಲೂಕಖ, ಹಾಗೂ ಬಾಲಕಿಯರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ (ಉರ್ದು ಮಾಧ್ಯಮ) ಶಾಲೆಗಳ ವಿದ್ಯಾರ್ಥಿಗಳು ವೀಕ್ಷಿಸಿ ಸದುಪಯೋಗ ಪಡೆದುಕೊಂಡರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಶ್ರೀಮತಿ ಭಾರತಿ ಸಜ್ಜನ್, ಸಹಾಯಕ ಲೆಕ್ಕಾಧಿಕಾರಿಗಳು, ತಾಲ್ಲೂಕು ಪಂಚಾಯತ್ ಗುರುಮಠಕಲ್ ಅವರು ಮಾತನಾಡಿ, ವಿದ್ಯಾರ್ಥಿಗಳು ಸ್ವತಃ ತಯಾರಿಸಿದ ವಿಜ್ಞಾನ ಮಾದರಿಗಳು ಅವರ ಸೃಜನಶೀಲತೆ ಮತ್ತು ವೈಜ್ಞಾನಿಕ ಮನೋಭಾವದ ಅತ್ಯುತ್ತಮ ಉದಾಹರಣೆಗಳಾಗಿವೆ ಎಂದು ಶ್ಲಾಘಿಸಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಹನುಮಂತ್ , ವಿಷಯ ಪರೀಕ್ಷಕರು ಮಾತನಾಡಿ, ವಿದ್ಯಾರ್ಥಿಗಳು ತಮ್ಮ ಕಲ್ಪನೆಗಳಿಗೆ ರೂಪ ನೀಡಿ ಅತ್ಯುತ್ತಮ ಮಾದರಿಗಳನ್ನು ಪ್ರದರ್ಶಿಸಿರುವುದು ಶ್ಲಾಘನೀಯವಾಗಿದೆ. ಇಂತಹ ವಿಜ್ಞಾನ ಹಾಗೂ ಆವಿಷ್ಕಾರ ಮೇಳಗಳು ಮಕ್ಕಳಲ್ಲಿ ವೈಜ್ಞಾನಿಕ ದೃಷ್ಟಿಕೋನವನ್ನು ಬೆಳೆಸಲು ಸಹಕಾರಿಯಾಗುತ್ತವೆ ಎಂದರು. ಅತಿಥಿಯಾಗಿ ಭಾಗವಹಿಸಿದ್ದ ಬಾಲಪ್ಪ (ಸಿಆರ್‌ಪಿ), ಗುರುಮಠಕಲ್ ಕ್ಲಸ್ಟರ್ ಅವರು ಮಾತನಾಡಿ, ಪ್ರತಿಯೊಂದು ಮಾದರಿಯಲ್ಲೂ ಮಕ್ಕಳ ಪ್ರತಿಭೆ ಸ್ಪಷ್ಟವಾಗಿ ಕಾಣಿಸಿಕೊಂಡಿದ್ದು, ವಿದ್ಯಾರ್ಥಿಗಳಲ್ಲಿನ ಕುತೂಹಲ ಮತ್ತು ಸೃಜನಶೀಲತೆ ಭವಿಷ್ಯದ ವಿಜ್ಞಾನಿಗಳಿಗೆ ದಾರಿ ತೋರಿಸುವಂತಿದೆ ಎಂದು ಅಭಿಪ್ರಾಯಪಟ್ಟರು. ಶಾಲೆಯ ಉಪಪ್ರಾಚಾರ್ಯರಾದ ಕೃಷ್ಣಾರೆಡ್ಡಿ ಅವರು ಮಾತನಾಡಿ, ಗುರುಮಠಕಲ್ ತಾಲೂಕಿನ ವಿವಿಧ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳ ಸುಮಾರು ಆರು ಶಾಲೆಗಳ ವಿದ್ಯಾರ್ಥಿಗಳು ಈ ಮೇಳದಲ್ಲಿ ಭಾಗವಹಿಸಿದ್ದರಿಂದ ಕಾರ್ಯಕ್ರಮಕ್ಕೆ ಹೆಚ್ಚಿನ ವೈಶಿಷ್ಟ್ಯತೆ ಬಂದಿದೆ ಎಂದು ತಿಳಿಸಿದರು.

ಮಿನಿ ನಾವಿನ್ಯತೆ ಕೇಂದ್ರದ ಮುಖ್ಯಸ್ಥರಾದ ನಾಗೇಶ್ ಡಿ ಅವರು ಮಾತನಾಡಿ, ಅಗಸ್ತ್ಯ ಅಂತರಾಷ್ಟ್ರೀಯ ಪ್ರತಿಷ್ಠಾನದ ಮಾದರಿಗಳ ಜೊತೆಗೆ ವಿದ್ಯಾರ್ಥಿಗಳು ತಯಾರಿಸಿದ ಮಾದರಿಗಳು ಎಲ್ಲರ ಗಮನ ಸೆಳೆದವು. ವಿದ್ಯಾರ್ಥಿಗಳು ಉತ್ಸಾಹದಿಂದ ತಮ್ಮ ಮಾದರಿಗಳ ಕಾರ್ಯವಿಧಾನವನ್ನು ವಿವರಿಸಿದುದು ಅತ್ಯಂತ ಶ್ಲಾಘನೀಯವಾಗಿದೆ ಎಂದು ಹೇಳಿದರು. ಈ ಕಾರ್ಯಕ್ರಮದಲ್ಲಿ ನರೇಶ್ ಕುಮಾರ್ ಎಂ (ತಾಲ್ಲೂಕು ಹಾಗೂ ಪಟ್ಟಣ ಪಂಚಾಯತ್), ತಿಪ್ಪಯ್ಯ ನಾಯಕ್ (ಎಸ್‌ಡಿಎಂಸಿ ಅಧ್ಯಕ್ಷರು, ಸತೀಶ್ ಹಾಗೂ ಶ್ರೀ ನರಸಿಂಹ ರೆಡ್ಡಿ (ಸಂಪನ್ಮೂಲ ವ್ಯಕ್ತಿಗಳು) ಉಪಸ್ಥಿತರಿದ್ದರು.ಶಾಲೆಯ ಶಿಕ್ಷಕ ಹಾಗೂ ಶಿಕ್ಷಕೇತರ ಸಿಬ್ಬಂದಿಗ'ಳಾದ ನಜಮಸ ಸಹಾರಾ , ಲಕ್ಷ್ಮಿಕಾಂತ್ ರೆಡ್ಡಿ, ವೆಂಕಟರಾಮುಲು, ರವಿಕಾಂತ್, ರಾಜಕುಮಾರ್, ನರಸಪ್ಪ, ದೀಪಾ, ನುಜಹತ್, ಸಪೂರಾ ಬಾನು , ಇಂದಿರಾ, ಶ್ರೀ ಲಕ್ಷ್ಮಿ ಹಾಗೂ ಇಕ್ರಾ (ಅತಿಥಿ ಶಿಕ್ಷಕರು), ಸರೋಜಾ , ಮಹದೇವಮ್ಮ, ಕಮಲಮ್ಮ ಮತ್ತು ದೇವಿಂದ್ರಮ್ಮ ಅವರುಗಳು ಕಾರ್ಯಕ್ರಮದ ಯಶಸ್ಸಿಗೆ ಅಮೂಲ್ಯ ಸಹಕಾರ ನೀಡಿದರು.ಒಟ್ಟಾರೆಯಾಗಿ, ಈ ವಿಜ್ಞಾನ ವಸ್ತು ಪ್ರದರ್ಶನ ಹಾಗೂ ಆವಿಷ್ಕಾರ ಮೇಳವು ವಿದ್ಯಾರ್ಥಿಗಳಲ್ಲಿ ವಿಜ್ಞಾನಾಸಕ್ತಿ, ಸೃಜನಶೀಲತೆ ಮತ್ತು ನವೀನತೆಯನ್ನು ಬೆಳೆಸುವಲ್ಲಿ ಮಹತ್ವದ ಪಾತ್ರ ವಹಿಸಿ ಅತ್ಯಂತ ಯಶಸ್ವಿಯಾಗಿ ಸಂಪನ್ನವಾಯಿತು.

## ಸಹಕಾರ ಸಂಘಗಳ ಕಾರ್ಯದರ್ಶಿಗಳಿಗೆ ಸಹಕಾರ ಚುನಾವಣೆ ಕುರಿತು ತರಬೇತಿ ಅಗತ್ಯ – ಶೇಖ್ ಹುಸೇನ್



ಯುವಮಾರ್ಗ ಸುದ್ದಿ

**ರಾಯಚೂರು– ಜ. 22–** ಇತ್ತಿಚೀಗೆ ಸಹಕಾರ ಸಚಿವಾಲಯ ಆರಂಭವಾಗಿ ಪಾರದರ್ಶಕವಾಗಿ ಚುನಾವಣೆ ನಡೆಸಲು ಮುಖ್ಯಕಾರ್ಯನಿರ್ವಹಣಾಧಿಕಾರಿ ಹಾಗೂ ಚುನಾವಣಾಧಿಕಾರಿಗಳಿಗೆ ಚುನಾವಣೆಯ ಬಗ್ಗೆ ತರಬೇತಿ ಅಗತ್ಯವಿದ್ದುದರಿಂದ ರಾಯಚೂರು ಜಿಲ್ಲಾ ಸಹಕಾರ ಒಕ್ಕೂಟದಿಂದ ಈ ಒಂದು ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಕಾರ್ಯದರ್ಶಿಗಳು ತರಬೇತಿ ಪ್ರಯೋಜನ ಪಡೆಯುವಂತೆ ಸಹಕಾರ ಸಂಘಗಳ ಸಹಾಯಕ ನಿಬಂಧಕ ಶೇಖ್ ಹುಸೇನ್ ತಿಳಿಸಿದರು.

ಅವರು ನಗರದ ಜೆ.ಸಿ. ಭವನ, ರಾಯಚೂರುದಲ್ಲಿ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ರಾಯಚೂರು ಜಿಲ್ಲಾ ಸಹಕಾರ ಒಕ್ಕೂಟ, ರಾಯಚೂರು ಕೊಪ್ಪಳ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್, ಸಹಕಾರ ಚುನಾವಣಾ ಪ್ರಾಧಿಕಾರ, ಸಹಕಾರ ಇಲಾಖೆ ಹಾಗೂ ರಾಯಚೂರು ಜಿಲ್ಲೆಯಲ್ಲಿ ಚುನಾವಣೆಗೆ ಬಾಕಿ ಇರುವ ವಿವಿಧ ಸಹಕಾರ ಸಂಘಗಳು ಇವುಗಳ ಸಂಯುಕ್ತ ಆಶ್ರಯದಲ್ಲಿ ಜರುಗಿದ "ಸಹಕಾರ ಸಂಘಗಳ ಆಡಳಿತ ಮಂಡಳಿ ಚುನಾವಣೆ ಸಂಬಂಧ ಚುನಾವಣಾಧಿಕಾರಿ, ಪರಿಶೀಲನಾಧಿಕಾರಿ ಹಾಗೂ ಮುಖ್ಯಕಾರ್ಯನಿರ್ವಹಣಾಧಿಕಾರಿಗಳಿಗೆ ಸಹಕಾರ ಚುನಾವಣೆ ಕುರಿತ ವಿಶೇಷ ಕಾರ್ಯಕ್ರಮ" ಉದ್ಘಾಟಿಸಿ ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ರಾಯಚೂರು ಜಿಲ್ಲಾ ಸಹಕಾರ ಒಕ್ಕೂಟ ನಿರ್ದೇಶಕ ಎನ್. ಭೀಮರೆಡ್ಡಿ ವಹಿಸಿದ್ದರು. ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ್ದ ಲಿಯಾಖತ್ ಅಲಿ ನಿವೃತ್ತ ಸಹಕಾರ ಸಹಾಯಕ ನಿಬಂಧಕರು, ಹೊಸಪೇಟೆ ಇವರು ಆಗಮಿಸಿದ್ದರು.

ಕಾರ್ಯಕ್ರಮದಲ್ಲಿ ಮುಖ್ಯತಿಥಿಗಳಾಗಿ ಸಿದ್ದಣ್ಣ ಸಹಕಾರ ಮಾರಾಟಾಧಿಕಾರಿ, ಸಹಕಾರ ಇಲಾಖೆ ರಾಯಚೂರು ಮಾತನಾಡಿ ಸಂಘಗಳ ಮುಖ್ಯಕಾರ್ಯನಿರ್ವಹಣಾಧಿಕಾರಿ ಮತ್ತು ಚುನಾವಣಾಧಿಕಾರಿಗಳು ಜವಾಬ್ದಾರಿಯಿಂದ ಚುನಾವಣೆ ಕಾರ್ಯ ನಿರ್ವಹಿಸಲು ಅನುಕೂಲವಾಗುವಂತೆ ಸಂಪನ್ಮೂಲ ವ್ಯಕ್ತಿಗಳು ತಿಳಿಸುವ ಕಾನೂನು ಅಂಶಗಳ ಸಲಹೆ ಪಡೆಯುವಂತೆ ತಿಳಿಸಿದರು.

ಸಂನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ್ದ ಲಿಯಾಖತ್ ಅಲಿ ನಿವೃತ್ತ ಸಹಕಾರ ಸಹಾಯಕ ನಿಬಂಧಕರು, ಹೊಸಪೇಟೆ ಇವರು ತಮ್ಮ ಉಪನ್ಯಾಸದಲ್ಲಿ ಸಹಕಾರ ಸಂಘಗಳ ಕಾಯ್ದೆ 1959ಕ್ಕೆ ತಿದ್ದುಪಡಿಗಳಾಗಿ ಸಹಕಾರ ಕ್ಷೇತ್ರದಲ್ಲಿ ಅನೇಕ ಮಹತ್ವದ ಬದಲಾವಣೆಯಾದ ಬಗ್ಗೆ ತಿಳಿಸಿ, ಈಗ ಸಹಕಾರ ಚುನಾವಣಾ ಪ್ರಾಧಿಕಾರದ ನಿರ್ದೇಶನ ಮತ್ತು ನಿಬಂಧನೆಗಳ ಪ್ರಕಾರ ಚುನಾವಣಾ ಕರ್ತವ್ಯ ನಿರ್ವಹಿಸಬೇಕಾಗಿರುತ್ತದೆ. ಅದಕ್ಕಾಗಿ ಮುಖ್ಯಕಾರ್ಯನಿರ್ವಹಣಾಧಿಕಾರಿ, ಪರಿಶೀಲನಾಧಿಕಾರಿ ಹಾಗೂ ಚುನಾವಣಾಧಿಕಾರಿಗಳ ಕರ್ತವ್ಯಗಳು, ಸಹಕಾರ ಚುನಾವಣೆಯಲ್ಲಿ ಅನುಸರಿಸಬೇಕಾದ ಮಹತ್ವದ ಕ್ರಮಗಳ ಕುರಿತು, ಚುನಾವಣೆಯ ವಿವಿಧ ರೂಪರೇಷೆಗಳಾದ ಮತದಾರ ಪಟ್ಟಿ ತಯಾರಿಕೆ, ನಾಮಪತ್ರ ಸ್ವೀಕೃತಿ, ಪರಿಶೀಲನೆ, ಮತ ಎಣಿಕೆ ಹೀಗೆ ಪ್ರತಿಯೊಂದು ಹಂತದಲ್ಲಿಯೂ ಚುನಾವಣಾಧಿಕಾರಿಗಳು ಜವಬ್ದಾರಿ ಹಾಗೂ ಜಾಗರೂಕತೆಯಿಂದ ಕರ್ತವ್ಯನಿರ್ವಹಿಸುವಂತೆ ತಿಳಿಸಿದರು.

ಪ್ರಾರಂಭದಲ್ಲಿ ರಾಯಚೂರು ಜಿಲ್ಲಾ ಸಹಕಾರ ಒಕ್ಕೂಟದ ಶ್ರೀಮತಿ ಮಂಜುಳಾ ಸರ್ವರನ್ನು ಸ್ವಾಗತಿಸಿದರು. ಗಾಯತ್ರಿ ವೈ. ಮುಖ್ಯಕಾರ್ಯನಿರ್ವಹಣಾಧಿಕಾರಿ ಜಿಲ್ಲಾ ಸಹಕಾರ ಒಕ್ಕೂಟ ರಾಯಚೂರು ಕಾರ್ಯಕ್ರಮದ ಬಗ್ಗೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಕು॥ ಅಶ್ವಿನಿ ಕೆ. ಜಿಲ್ಲಾ ಸಹಕಾರ ಶಿಕ್ಷಕರು ರಾಯಚೂರು ನಿರೂಪಿಸಿ, ಒಕ್ಕೂಟದ ವ್ಯವಸ್ಥಾಪಕ ಮಲ್ಲಿಕಾರ್ಜುನ ಎಂ. ಅಮ್ಮಿನಭಾವಿ ವಂದಿಸಿದರು.

ತರಬೇತಿಯಲ್ಲಿ ಶಿಬಿರದಲ್ಲಿ ಜಿಲ್ಲೆಯ ವಿವಿಧ ತಾಲೂಕುಗಳಲ್ಲಿ ಚುನಾವಣೆಗೆ ಬಾಕಿ ಇರುವ ಸಹಕಾರ ಸಂಘಗಳ ಮುಖ್ಯಕಾರ್ಯನಿರ್ವಾಹಕರು, ಕಾರ್ಯದರ್ಶಿಗಳು ಹಾಗೂ ನಿಯೋಜನೆಗೊಂಡ ರಿಟರ್ನಿಂಗ್ ಅಧಿಕಾರಿಗಳು ಭಾಗವಹಿಸಿ, ಚುನಾವಣೆಗೆ ಸಂಬಂಧಿಸಿದ ಸಂಶಯ ಮತ್ತು ಸಮಸ್ಯೆಗಳಿಗೆ ಸಂಪನ್ಮೂಲ ವ್ಯಕ್ತಿಗಳಿಂದ ಪರಿಹಾರ ಪಡೆದುಕೊಂಡು, ಜಿಲ್ಲಾ ಸಹಕಾರ ಒಕ್ಕೂಟ ಆಯೋಜಿಸಿದ ಕಾರ್ಯಕ್ರಮದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

## ರಾಯಚೂರು ಜಿಲ್ಲಾದ್ಯಂತ ಸ್ಪರ್ಶ್ ಕುಷ್ಠರೋಗ ಜಾಗೃತಿ ಅಭಿಯಾನ ಅಚ್ಚುಕಟ್ಟಾಗಿ ನಡೆಯಲಿ: ಈಶ್ವರ ಕುಮಾರ್ ಕಾಂದೂ



ಯುವಮಾರ್ಗ ಸುದ್ದಿ

**ರಾಯಚೂರು– ಜ. 22–** ಜನವರಿ 30ರಿಂದ ಫೆಬ್ರವರಿ 13ರವರೆಗೆ ರಾಯಚೂರು ಜಿಲ್ಲೆಯ ಪ್ರತಿ ಗ್ರಾಮಗಳಲ್ಲಿ ಹಾಗೂ ನಗರ ಪ್ರದೇಶಗಳಲ್ಲಿ ಸ್ಪರ್ಶ್ ಕುಷ್ಠರೋಗ ಜಾಗೃತಿ ಅಭಿಯಾನವು ಅಚ್ಚುಕಟ್ಟಾಗಿ ನಡೆಯಬೇಕು. ಈ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಬೇಕು. ಈ ಬಗ್ಗೆ ಜಿಲ್ಲೆಯ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕೆಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜನವರಿ 21ರ ಬುಧವಾರ ನಗರದ ಜಿಲ್ಲಾ ಪಂಚಾಯತ್ ಕಚೇರಿಯಲ್ಲಿ ನಡೆದ ಸ್ಪರ್ಶ್ ಕುಷ್ಠರೋಗ ಜಾಗೃತಿ ಅಭಿಯಾನದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ದೇಹದ ಮೇಲಿನ ಸ್ಪರ್ಶಜ್ಞಾನವಿಲ್ಲದ ತಿಳಿಬಿಳಿ ತಾಮ್ರವರ್ಣದ ಮಚ್ಚೆಗಳು, ನರ ಮತ್ತು ಚರ್ಮದ ಖಾಯಿಲೆಯಾದ ಕುಷ್ಠರೋಗವನ್ನು ನಿರ್ಮೂಲನೆ ಮಾಡಲು ನಾವೆಲ್ಲರೂ ಪಣತೊಡಬೇಕು. ಶತ ಶತಮಾನಗಳಿಂದ ಕಾಡುತ್ತಿರುವ ಈ ಕುಷ್ಠರೋಗವನ್ನು ನಿರ್ಮೂಲನೆ ಮಾಡಬೇಕು. ಪ್ರತಿ ಗ್ರಾಮಗಳಲ್ಲಿ ಹಾಗೂ ನಗರ ಪ್ರದೇಶಗಳಲ್ಲಿ ಸ್ಪರ್ಶ್ ಕುಷ್ಠರೋಗ ಬಗ್ಗೆ ಅರಿವು ಮೂಡಿಸಬೇಕು. ಕುಷ್ಟರೋಗವನ್ನುಗಿದ್ದು, ಇದನ್ನು ಮಾತ್ರೆಗಳ ಮೂಲಕ ಸಂಪೂರ್ಣ ಗುಣಪಡಿಸಬಹುದಾಗಿದ್ದು ಎಲ್ಲ ಆರೋಗ್ಯ ಕೇಂದ್ರಗಳಲ್ಲಿ ಉಚಿತ ಚಿಕಿತ್ಸೆ ಲಭ್ಯ ಎಂಬುದನ್ನು ಹೆಚ್ಚಿನ ಜಾಗೃತಿ ಮೂಡಿಸಬೇಕೆಂದರು.

ಶಾಪದಿಂದ ಬರುತ್ತದೆ ಎಂಬ ಜನರಲ್ಲಿ ತಪ್ಪು ನಂಬಿಕೆಯನ್ನು ಹೊಗಲಾಡಿಸಿ, ಇದು ಮೈಕೊ ಬ್ಯಾಕ್ಟಿರಿಯಂ ಲೇಪ್ರೆ ಎಂಬ ಸೂಕ್ಷ್ಮಾಣುವಿನಿಂದ ಬರುವ ಹಾಗೂ ಖಾಯಿಲೆ ಹೊಂದಿದ ವ್ಯಕ್ತಿ ಕೆಮ್ಮಿದಾಗ, ಸಿನಿದಾಗ ಬ್ಯಾಕ್ಟಿರಿಯಾವು ಉಸಿರಿನ ಮೂಲಕ ಜೊತೆಗಿರುವವರಿಗೆ ದೀರ್ಘಾವಧಿಯಲ್ಲಿ ಬರುವ ಬಗ್ಗೆ ತಿಳಿಸುವ ಒಂದು ವೇಳೆ ಸ್ಪರ್ಶಜ್ಞಾನವಿಲ್ಲದ ಮಚ್ಚೆಗಳು ಕಂಡು ಬಂದರೆ ತಕ್ಷಣವೇ ವೈದ್ಯರ ಬಳಿ ಪರೀಕ್ಷೆ ಮಾಡಿಸಿ ಖಚಿತ ಪಟ್ಟರೆ ದೇಹದ ಮೇಲಿನ ಮಚ್ಚೆಗಳ ಆಧಾರದ ಮೇಲೆ 6 ತಿಂಗಳಿನಿಂದ ಒಂದು ವರ್ಷ ಉಚಿತವಾದ ಚಿಕಿತ್ಸೆಯೊಂದಿಗೆ ಸಂಪೂರ್ಣ ವಾಸಿಯಾಗುತ್ತದೆ ಎಂಬುದನ್ನು ಮನವರಿಕೆ ಮಾಡಿ ಎಂದರು. ಜಿಲ್ಲೆಯ ಎಲ್ಲ ಗ್ರಾಮಗಳಲ್ಲಿ ಶಾಲೆಗಳಲ್ಲಿ ಮಕ್ಕಳಿಗೆ, ಗ್ರಾಮ ಪಂಚಾಯತ ಸದಸ್ಯರಿಗೆ ಸ್ತ್ರೀ-ಶಕ್ತಿ ಸಂಘ, ಯುವಕ-ಯುವತಿ ಸಂಘ, ವಿವಿಧ ಸಂಸ್ಥೆಗಳ ಸದಸ್ಯರಿಗೆ ಹೆಚ್ಚಿನ ಜಾಗೃತಿ ಮೂಡಿಸಬೇಕು ಎಂದರು.ಈ ವೇಳೆ ಕುಷ್ಠರೋಗ ಜನಜಾಗೃತಿಯ ಭಿತ್ತಿಪತ್ರ ಬಿಡುಗಡೆ ಮಾಡಿದರು.

ಇದೇ ಸಂದಂರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ ಸುರೇಂದ್ರ ಬಾಬು, ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ.ವಿಜಯಶಂಕರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ನವೀನ್ ಕುಮಾರ್, ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಕೆ.ಡಿ ಬಡಿಗೇರ, ಜಿಲ್ಲಾ ಕುಷ್ಟರೋಗ ನಿರ್ಮೂಲನಾಧಿಕಾರಿ ಡಾ.ಮಹ್ಮದ್ ಶಾಕೀರ್ ಮೊಹಿಯುದ್ದೀನ್, ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ನಂದಿತಾ ಎಮ್.ಎನ್., ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಗಣೇಶ್ ಕೆ.,ಡಿಪಿಡಿಓ ಡಾ.ಚಂದ್ರಶೇಖರಯ್ಯ, ಜಿಲ್ಲಾ ಎನ್‌ಫೋಸ್ಮೆಂಟ್ ಅಧಿಕಾರಿ ಡಾ.ಶಿವಕುಮಾರ್, ಜಿಲ್ಲಾ ಕಾರಗೃಹದ ಅಧಿಕ್ಷಕರಾದ ಅನೀತಾ ಎಸ್ ಹಿರೇಮನಿ, ಜಿಲ್ಲಾ ಕಾರ್ಮಿಕ ಅಧಿಕಾರಿ ಆರತಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಡ್ಯಾಪ್ಕೋ ಮೇಲ್ವಿಚಾರಕ ಮಲ್ಲಯ್ಯ ಮಠಪತಿ, ಡಿವೈಹೆಚ್‌ಇಓ ಬಸಯ್ಯ, ಹೆಚ್‌ಐಓ ದೊಡ್ಡಮನಿ ಬಿಬಿ, ಎಲ್‌ಟಿಓ ಸಾಯಿರಾಬಾನು, ಮೃತ್ಯುಂಜಯ, ಎಪಡಮಲಾಜಿಷ್ಟ್ ಶ್ರೀನಿವಾಸ್, ಶಾಂತಕುಮಾರ್, ಹೊಸಬೆಳಕು ಸಂಸ್ಥೆಯ ಈರಣ್ಣ, ನಾಯಕ್, ಜ್ಞಾನಕುಮಾರಿ, ನಾಗರಾಜ ರತಕಲ್ಲ ಸೇರಿದಂತೆ ಇತರರು ಸಭೆಯಲ್ಲಿ ಇದ್ದರು.

## ಈರನಗೌಡ ಆಸರತಿ ಉಪನ್ಯಾಸಕರಿಗೆ ಕಾವ್ಯಶ್ರೀ ಚಾರಿತ್ರಿಬ ಟ್ರಸ್ಟ್ ಹಾಗೂ ಸಿದ್ಧರೂಢ ಆಶ್ರಮ ಬೆಂಗಳೂರು ನೀಡುವ 2025 ನೇ ಸಾಲಿನ ಶ್ರೀ ಶ್ರೀ ಸದ್ಗುರು ದ್ರೋಣಾಚಾರ್ಯ ಪ್ರಶಸ್ತಿ ಪ್ರಧಾನ

ಯುವಮಾರ್ಗ ಸುದ್ದಿ



ಕಾವ್ಯ ಶ್ರೀ ಚಾರಿಟೇಬಲ್ ಟ್ರಸ್ಟ್ (ರಿ.) ಕರ್ನಾಟಕ ಇವರ ವತಿಯಿಂದ ಗಣರಾಜ್ಯೋತ್ಸವ ಸಂಭ್ರಮ ಹಾಗೂ ಆರೂಢ ಭಾರತ ಸ್ವಾಮಿಯವರ ಸನ್ಯಾಸ ದಶಮಾನೋತ್ಸವ ಸಮಾರಂಭದಲ್ಲಿ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿರುವ ಸಾಧಕ ಶಿಕ್ಷಕರಿಗೆ ಒಂದೇ ವೇದಿಕೆಯಲ್ಲಿ ಸುಮಾರು 20 ಜನ ಮಠದ ಸ್ವಾಮೀಜಿಗಳಿಂದ ಪುಷ್ಪಾರ್ಪಣೆ ಮತ್ತು ಆಶೀರ್ವದಿಸುವ ಮೂಲಕ ಶ್ರೀ ಶ್ರೀ ಸದ್ಗುರು ದ್ರೋಣಾಚಾರ್ಯ ಪ್ರಶಸ್ತಿ ನೀಡಲಾಗುತ್ತಿದೆ. ಈ ಪ್ರಶಸ್ತಿಯನ್ನು ದಿನಾಂಕ 25-01-2026 ರಂದು ಬೆಂಗಳೂರಿನ ಆಶ್ರಮದಲ್ಲಿ ಪ್ರಧಾನ ಮಾಡಲಾಗುತ್ತದೆ.

# ಯುವ ಜನಾಂಗ ದೇಶದ ಭವಿಷ್ಯದ ಆಧಾರಸ್ತಂಭ:ಭೀಮಾಶಂಕರ

**ಕಲಬುರಗಿ,ಜ.22–**ಕೊತ್ತಲ ಬಸವೇಶ್ವರ ಭಾರತೀಯ ಶಿಕ್ಷಣ ಸಮಿತಿ ನಗರದ ಮಿನಿ ವಿಧಾನಸೌಧ ಎದುರುಗಡೆ ಇರುವ ಜ್ಞಾನ ಸಿಂಚನ ಪದವಿಪೂರ್ವ ಕಾಲೇಜಿನಲ್ಲಿ ಭಾರತೀಯ ಚುನಾವಣಾ ಸುಧಾರಣಾ ಹೋರಾಟ ಸಮಿತಿ ವತಿಯಿಂದ' ನನ್ನ ಮತ ಮಾರಾಟಕ್ಕಿಲ್ಲ ಮತದಾರ ಜಾಗೃತಿ ಆಂದೋಲನ' ಕಾರ್ಯಕ್ರಮವನ್ನು ಹಮ್ಮಿಕೊಂಡಿತ್ತು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಭೀಮಾಶಂಕರ ಫಿರೋಜಾಬಾದ್ ಅವರು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತ, ಇವತ್ತಿನ ಯುವ ಜನಾಂಗ ದೇಶದ ಭವಿಷ್ಯದ ಆಧಾರ ಸ್ತಂಭವಾಗಿದ್ದು ,ಯುವ–ಜನಾಂಗ ಒಳ್ಳೆಯ ಮಾರ್ಗದಲ್ಲಿ ನಡೆದು ಜನ್ಮ ಕೊಟ್ಟ ತಂದೆ – ತಾಯಿ ಹಾಗೂ ವಿದ್ಯೆ ಕಲಿಸಿದ ಗುರುಗಳ ಗೌರವವನ್ನು ಹೆಚ್ಚಿಸುವ ಕೆಲಸ ಮಾಡಬೇಕೆಂದು ಹೇಳಿದರು.

ಇವತ್ತು ರಾಜಕಾರಣ ಬರು– ಬರುತ್ತಾ ವ್ಯಾಪಾರೀಕರಣವಾಗುತ್ತಿದ್ದು ಇದನ್ನು ತಡೆಗಟ್ಟುವ ಶಕ್ತಿ ವಿದ್ಯಾರ್ಥಿ ಹಾಗೂ ಯುವಶಕ್ತಿಗೆ ಮಾತ್ರ ಇದೆ ಎಂದು ತಿಳಿಸಿದರು. ದೇಶದಲ್ಲಿ ಹಾಗೂ ರಾಜ್ಯಗಳಲ್ಲಿ ಚುನಾವಣೆಗಳಲ್ಲಿ ನಡೆಯುತ್ತಿರುವ ಭ್ರಷ್ಟಾಚಾರ ನಿಲ್ಲದೆ ಹೋದರೆ ಪ್ರಜಾಪ್ರಭುತ್ವಕ್ಕೆ ಗಂಡಾಂತರ ಕಾದಿದೆ. ವಿದ್ಯಾರ್ಥಿ ಶಕ್ತಿ ಅನ್ಯಾಯ ವಿರುದ್ಧ ಹೋರಾಟ ಮಾಡುವ ಮನೋಭಾವವನ್ನು ಬೆಳೆಸಿಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ತಿಳಿಸಿದರು.

ಉಪನ್ಯಾಸಕರಾದ ಶಿವಶರಣಪ್ಪ ಪೂಜಾರಿ ನಿಜಶರಣ ಅಂಬಿಗರ ಚೌಡಯ್ಯನವರ ಜಯಂತಿಯ ನಿಮಿತ್ತ, ಅವರ ವ್ಯಕ್ತಿತ್ವ ಹಾಗೂ ಸಂಘರ್ಷದ ಜೀವನ ಕುರಿತು ಮಾತನಾಡುತ್ತಾ 12ನೇ ಶತಮಾನದ ನಿಜಶರಣ ಅಂಬಿಗರ ಚೌಡಯ್ಯನವರು ನೇರ ಹಾಗೂ ನಿಷ್ಠುರ ನುಡಿಯ ವಚನಕಾರರಾಗಿದ್ದು ಅವರ ವಚನಗಳನ್ನು ಪಾಲಿಸುವುದರ ಮುಖಾಂತರ ಜೀವನದಲ್ಲಿ ನೆಮ್ಮದಿ ಬರಲಿಕ್ಕೆ



ಸಾಧ್ಯ ಮತ್ತು ಸ್ವಾಸ್ಥ ಸಮಾಜವನ್ನು ನಿರ್ಮಾಣ ಮಾಡಲಿಕ್ಕೆ ಸಹಕಾರಿಯಾಗುತ್ತದೆ ಎಂದರು.

ಭಾರತೀಯ ಚುನಾವಣಾ ಸುಧಾರಣಾ ಹೋರಾಟ ಸಮಿತಿ ಸಂಸ್ಥಾಪಕರಾದ ರಮೇಶ.ಆರ್.ದುತ್ತರಗಿ ಪ್ರಾಸ್ತಾವಿಕವಾಗಿ ಮಾತನಾಡುತ್ತ, ದೇಶದಲ್ಲಿ ಹಾಗೂ ರಾಜ್ಯಗಳಲ್ಲಿ ಹೆಚ್ಚುತ್ತಿರುವ ಭ್ರಷ್ಟಾಚಾರವನ್ನು ನಿಯಂತ್ರಣವಾಗಬೇಕಾದರೆ, ಚುನಾವಣೆಗಳಲ್ಲಿ ಹೆಚ್ಚುತ್ತಿರುವ ಹಣಬಲವನ್ನು ನಿಯಂತ್ರಿಸಬೇಕು. ಯುವಕರು– ವಿದ್ಯಾರ್ಥಿಗಳು ಇಂದು ಪ್ರತಿಯೊಂದು ಗ್ರಾಮದಲ್ಲಿಯೂ, ನಗರಗಳಲ್ಲಿಯೂ ಚುನಾವಣೆಗಳು ಮುಕ್ತ ಹಾಗೂ ಪಾರದರ್ಶಕವಾಗಿ ನಡೆಯುವಂತೆ ಜನರಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಮಾಡಬೇಕು. ಒಂದು ವೇಳೆ ವಿದ್ಯಾರ್ಥಿಗಳು ಯುವಕರು ಚುನಾವಣಾ ಭ್ರಷ್ಟಾಚಾರದ ವಿರುದ್ಧ ಹೋರಾಟ ಮಾಡದೆ ಹೋದರೆ ಬಹುದೊಡ್ಡ ಬೆಲೆ ತೆರಬೇಕಾಗುತ್ತದೆ.ಚುನಾವಣೆ ಸಂದರ್ಭದಲ್ಲಿ ಹಣ ನೀಡಲು ಬಂದವರನ್ನು ಬಹಿಷ್ಕರಿಸಬೇಕು ಎಂದು ವಿದ್ಯಾರ್ಥಿಗಳಿಗೆ ತಿಳಿಸಿದರು. ಪ್ರತಿಯೊಬ್ಬ ವಿದ್ಯಾರ್ಥಿಗಳು ತಪ್ಪದೆ ದಿನನಿತ್ಯ ಪತ್ರಿಕೆಯನ್ನು ಓದಬೇಕು. ಪತ್ರಿಕೆ ಓದುವುದರಿಂದ ವಿದ್ಯಾರ್ಥಿಗಳಲ್ಲಿ ವಾಸ್ತವಿಕ ಸಮಾಜದ ಸತ್ಯವನ್ನು ಅರಿವಿಗೆ ಬರುತ್ತದೆ.ಇದರಿಂದ ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಾಸವಾಗುತ್ತದೆ.ಮತ್ತು ನಿರಂತರವಾಗಿ ವಿದ್ಯಾರ್ಥಿಗಳು ಪತ್ರಿಕೆಗಳನ್ನು ಓದುವುದರಿಂದ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಹೆಚ್ಚಿನ ಅನುಕೂಲವಾಗುತ್ತದೆ ಎಂದು ತಿಳಿಸಿದರು. ಅದರಂತೆಯೇ ಸಿದ್ದಗಂಗೆಯ ಶ್ರೀ ಶಿವಕುಮಾರ ಸ್ವಾಮೀಜಿಗಳ ಪುಣ್ಯತಿಥಿಯ ನಿಮಿತ್ಯ ಮಾತನಾಡುತ್ತಾ ಶ್ರೀ ಶಿವಕುಮಾರ ಸ್ವಾಮೀಜಿಗಳು ಜಾತಿ ಮತ ಪಂಥ ಎನ್ನದೆ ರಾಜ್ಯದ ಹಾಗೂ ದೇಶದ ಲಕ್ಷಾಂತರ ಬಡ ಮಕ್ಕಳಿಗೆ ಊಟ ವಸತಿ ಶಿಕ್ಷಣ ದಾಸೋಹ ನೀಡುವದರ ಮುಖಾಂತರ ನಿತ್ಯ ಪ್ರಾತಸ್ಮರಣಿಯರಾಗಿದ್ದಾರೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯರಾದ ನಾಗರಾಜ ಹಡಪದ ಅವರು ಮಾತನಾಡುತ್ತಾ ವಿದ್ಯಾರ್ಥಿಗಳು ಸಂತರು ಶರಣರು ದಾಸರು ಸೂಫಿಗಳ ಸ್ವಾತಂತ್ರ ಹೋರಾಟಗಾರರ, ಸಂವಿಧಾನ ಕರ್ತರ, ಸಮಾಜ ಸುಧಾರಕರ ಜೀವನ ಚರಿತ್ರೆಯನ್ನು ಅಧ್ಯಯನ ಮಾಡಬೇಕು ಅವರ ಮಾರ್ಗದಲ್ಲಿ ವಿದ್ಯಾರ್ಥಿಗಳು ಸಾಗಬೇಕು. ವಿದ್ಯಾರ್ಥಿಗಳು ಸಮಯದ ಮಹತ್ವವನ್ನು ಅರಿತುಕೊಂಡು ಶ್ರಮಪಟ್ಟು ತಮ್ಮ ಜೀವನ ಯಶಸ್ವಿಗೊಳಿಸಿಕೊಳ್ಳಬೇಕೆಂದು ತಿಳಿಸಿದರು. ವಿದ್ಯಾರ್ಥಿಗಳು ತಪ್ಪದೆ ಮತದಾರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೋಂದಾಯಿಸಬೇಕು.ಚುನಾವಣೆಯಲ್ಲಿ ಯಾವುದೇ ಆಸೆ ಆಮಿಷಕ್ಕೆ ಬಲಿಯಾಗದೆ ಪ್ರತಿಯೊಬ್ಬರು ತಪ್ಪದೆ ಮತದಾನ ಮಾಡಬೇಕು. ಚುನಾವಣೆಯಲ್ಲಿ ಸ್ಪರ್ಧಿಸಿದ ಅಭ್ಯರ್ಥಿಗಳು ಸರಿ ಎನಿಸದೆ ಇದ್ದಲ್ಲಿ ನೋಟಾ(NOTA) ದರೂ ತಪ್ಪದೆ ಮತ ಚಲಾಯಿಸಬೇಕು.ವಿದ್ಯಾರ್ಥಿಗಳು ಪ್ರತಿಯೊಬ್ಬರು ತಪ್ಪದೆ ತರಗತಿಯಲ್ಲಿ ಹಾಜರಿದ್ದು ಯಾವುದೇ ವಿಷಯವನ್ನು ತಿಳಿಯದೆ ಇದ್ದರೆ ಉಪನ್ಯಾಸಕದೊಂದಿಗೆ ಚರ್ಚಿಸಿ ತಿಳಿದುಕೊಳ್ಳಬೇಕೆಂದು ವಿದ್ಯಾರ್ಥಿಗಳಿಗೆ ತಿಳಿಸಿದರು.

ದ್ವಿತೀಯ ಪಿಯುಸಿ ವಾಣಿಜ್ಯ ವಿಭಾಗದ ವಿದ್ಯಾರ್ಥಿನಿ ಭಾಗ್ಯಶ್ರೀ ಪ್ರಾರ್ಥನೆ ಗೀತೆ ಹಾಡಿದರು. ಉಪನ್ಯಾಸಕರಾದ ಪವಿತ್ರಾ ಹಿರೇಮಠ ಸ್ವಾಗತಿಸಿದರು. ಉಪನ್ಯಾಸಕರಾದ ಅಂಕಿತಾ ಜೋಶಿ ನಿರೂಪಣೆ ಮಾಡಿದರು. ಉಪನ್ಯಾಸಕರಾದ ಸುರೇಖಾ ಕುಲಕರ್ಣಿ ವಿದ್ಯಾರ್ಥಿಗಳಿಗೆ ಪ್ರತಿಜ್ಞಾವಿಧಿ ಬೋಧಿಸಿದರು.ಉಪನ್ಯಾಸಕರಾದ ಪ್ರಿಯಾಂಕಾ ಬಾಗೋಡಿ ವಂದನಾರ್ಪಣೆ ಮಾಡಿದರು.

## ರಾಯಚೂರು ಜಿಲ್ಲೆಯಲ್ಲಿ ಜನವರಿ 26ರಂದು ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮೀ ಚೌಧರಿ ಪ್ರವಾಸ

**ರಾಯಚೂರು,ಜ.22–** ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮೀ ಚೌಧರಿ ಅವರು ಜನವರಿ 26ರಂದು ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿದ್ದಾರೆ.ಜನವರಿ 26ರ ಬೆಳಿಗ್ಗೆ 6.10ಕ್ಕೆ ಕಲಬುರಗಿ ನಗರದಿಂದ ನಿರ್ಗಮಿಸಿ ರಾಯಚೂರು ನಗರಕ್ಕೆ ಆಗಮಿಸಿ ಬೆಳಿಗ್ಗೆ 9 ಗಂಟೆಗೆ ರಾಯಚೂರು ವೈದ್ಯಕೀಯ ವಿಜ್ಞಾನ ಸಂಸ್ಥೆಗೆ ಭೇಟಿ ನೀಡುವರು. ಬಳಿಕ ಬೆಳಿಗ್ಗೆ 10 ಗಂಟೆಗೆ ರಾಯಚೂರಿನಿಂದ ಹೊರಟು ಬೆಳಿಗ್ಗೆ 11ಕ್ಕೆ ದೇವದುರ್ಗ ತಾಲೂಕಿನ ಗಬ್ಬೂರಿನ ಶ್ರೀಬೂದಿಬಸವೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ಹಮ್ಮಿಕೊಳ್ಳಲಾದ್ದ ಉಚಿತ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ಭಾಗವಹಿಸುವರು.ಮಧ್ಯಾಹ್ನ 1.45ಕ್ಕೆ ದೇವದುರ್ಗ ತಾಲೂಕು ಆಸ್ಪತ್ರೆಗೆ ಬಳಿಕ 3 ಗಂಟೆಗೆ ದೇವದುರ್ಗ ಪೊಲೀಸ್ ಠಾಣೆಗೆ ಭೇಟಿ ನೀಡುವರು. ಸಂಜೆ 4.30ಕ್ಕೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಪೋಸ್ಟ್ ಮೆಟ್ರಿಕ್ ಬಾಲಕಿಯರ ವಸತಿ ನಿಲಯಕ್ಕೆ ಭೇಟಿ ನೀಡುವರು. ಸಂಜೆ 5.30ಕ್ಕೆ ದೇವದುರ್ಗದಿಂದ ನಿರ್ಗಮಿಸಿ ರಾಯಚೂರಿಗೆ ಆಗಮಿಸಿ ರಾತ್ರಿ 11.10ಕ್ಕೆ ರಾಯಚೂರಿನಿಂದ ರೈಲು ಮಾರ್ಗವಾಗಿ ಕೇಂದ್ರ ಸ್ಥಾನ ಬೆಂಗಳೂರಿಗೆ ಪ್ರಯಾಣ ಬೆಳೆಸುವರು ಎಂದು ಅಧ್ಯಕ್ಷರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಪ್ತಾ ವಸೂಲಿ, ಅಕ್ರಮ ಮರಳು, ಮಟ್ಕಾ ದಂಧೆಗಳ ದಾಖಲೆಗಳೊಂದಿಗೆ ಬಹಿರಂಗ ಚರ್ಚೆಗೆ ಬನ್ನಿ : ಜೆಡಿಎಸ್ ಮುಖಂಡರ ಆಹ್ವಾನ



ಯುವಮಾರ್ಗ ಸುದ್ದಿ

**ದೇವದುರ್ಗ,ಜ.23–** ಮತದಾರರಿಂದ ತಿರಸ್ಕರಿಸ ಲ್ಪಟ್ಟ ಕುಟುಂಬದ ಸದಸ್ಯ ಶ್ರೀನಿವಾಸ ನಾಯಕ ಸುಳ್ಳು ಆರೋಪಗಳನ್ನು, ಹಗುರು ಭಾಷೆಯಲ್ಲಿ ಮಾತನಾಡು ವದನ್ನು ಬಿಟ್ಟು ಅಗತ್ಯ ದಾಖಲೆಗಳೊಂದಿಗೆ ಬಹಿರಂಗ ಚರ್ಚೆಗೆ ಬನ್ನಿ ಎಂದು ಜೆಡಿಎಸ್ ಮುಖಂಡರು ಸವಾಲು ಹಾಕಿದ್ದಾರೆ. ಪಟ್ಟಣದ ಪ್ರವಾಸಿ ಮಂದಿರದಲ್ಲಿ ತಾ.ಪಂ ಮಾಜಿ ಸದಸ್ಯ ಗೋವಿಂದರಾಜ್ ನಾಯಕ ಚಿಕ್ಕಗುಡ್ಡ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ತಾಲೂಕಿನಲ್ಲಿ ಶಾಖೆ ಮತ್ತು ಚಿಕ್ಕಗುಡ್ಡದ ಮನೆತನಕ್ಕೆ 50ವರ್ಷದ ರಾಜಕೀಯ ಹಿನ್ನಲೆ ಯಿದೆ.ಜಿ.ಪಂ, ತಾ.ಪಂ,ಎಪಿಎಂಸಿ, ಮಂಡಲ ಹೀಗೆ ಅನೇಕ ಹಂತಗಳಲ್ಲಿ ಗೆಲವು ಸಾಧಿಸಿ ಜನರ ಪ್ರೀತಿಗೆ ಪಾತ್ರರಾಗಿ ದ್ದಾರೆ.ವಸೂಲಿ ಪರಂಪರೆ ನಮ್ಮಲ್ಲಿ ಇಲ್ಲವೇ ಇಲ್ಲಾ ಪ್ರಸಂಗ ಬಂದಾಗ ಸ್ವಂತ ಆಸ್ತಿ ಮಾರಿ ರಾಜಕೀಯ ಮಾಡಿದ್ದೇವೆ.

ಶ್ರೀನಿವಾಸ ನಾಯಕನ ತಾತಾ ಎ.ವೆಂಕಟೇಶ ನಾಯಕರಿಗೆ ಗ್ರಾ.ಪಂನಿಂದ ಜಿ.ಪಂಗೆ ಕಳುಹಿಸಿದವರೇ ನಾವು.ಅವರ ಕುಟುಂಬ ಎಲ್ಲಾ ಪಕ್ಷಗಳಿಗೆ ಹೋಗಿದ್ದಾರೆ. ಕಳೆದ ವಿಧಾನಸಭಾ ಚುನಾವಣೆಯಲ್ಲಿ ಮಾನ್ವಿಕ್ಷೇತ್ರದಲ್ಲಿ ಬಿಜೆಪಿಯಿಂದ ಬಿ.ವಿ.ನಾಯಕ, ದೇವದುರ್ಗದಲ್ಲಿ ಬಿಜೆಪಿಯ ಕೆ.ಶಿವನಗೌಡ ನಾಯಕ, ಕಾಂಗ್ರೆಸ್‌ನಿಂದ ಶ್ರೀದೇವಿ ನಾಯಕ ಮತ್ತು ತನ್ನ ಪತ್ನಿ ರೂಪಾ ಶ್ರೀನಿವಾಸ ನಾಯಕರಿಗೆ ಜನರು ತಿರಸ್ಕರಿಸಿ ಮನೆಗೆ ಕಳುಹಿಸಿದ್ದಾರೆ.

ಕಳೆದ ಅನೇಕ ವರ್ಷಗಳಿಂದ ರಾಜಕಾರಣದಲ್ಲಿ ನಿರಂತರ ಅಧಿಕಾರಕ್ಕೆ ಅಂಟಿಕೊಂಡಿದ್ದವರಿಗೆ ಜನರು ತಕ್ಕ ಶಾಸ್ತಿ ನೀಡಿದ್ದಾರೆ.ಅಧಿಕಾರ ಕಳೆದುಕೊಂಡು ಹಪಾಹಪಿ ಪಡುತ್ತಿದ್ದಾರೆ.ದೌರ್ಜನ್ಯ, ದಬ್ಬಾಳಿಕೆ, ದುರಾಡಳಿತದಿಂದ ಬೇಸತ್ತ ಮತದಾರರರು ಶಾಂತಿಯುತ ವಾತಾವರಣಕ್ಕಾಗಿ ,ಅಕ್ರಮಗಳಿಗೆ ಕಡಿವಾಣ ಹಾಕಲಿಕ್ಕಾಗಿಯೇ ಕರೆ ಜಿ.ನಾಯಕರನ್ನು ಅಭೂತಪೂರ್ವ ಗೆಲವುಗೆ ಕಾರಣರಾಗಿ ದ್ದಾರೆ. ಶ್ರೀನಿವಾಸನಾಯಕ ಮತ್ತು ಅವರ ತಂಡಕ್ಕೆ ಇಂದು ಅಮವ್ಯಾಸೆ ಇದೆ ಮತ್ತೊಂದು ದಿನ ಭೇಟಿ ಮಾಡಿ ಎಂದು ಹೇಳಿದರೂ ಕೂಡ ದಬ್ಬಾಳಿಕೆ ತೋರಿಸಿ ಏಕಾಏಕಿ ಶಾಸಕರ ಮನೆಗೆ ಬಂದಿದ್ದರು.

ಬ್ಯಾಂಕ್ ನೌಕರನಾಗಿದ್ದ ಶ್ರೀನಿವಾಸ ನಾಯಕ ಅಂಚೆ ಇಲಾಖೆಯಲ್ಲಿ ಕೆಲಸ ಮಾಡುತ್ತಿದ್ದವರ ಮಗನಾಗಿದ್ದಾರೆ. ಬ್ಯಾಂಕ್ ನೌಕರರಿಗೆ ರಾಜೀನಾಮೆ ನೀಡಿ, ತಾತಾ,ಮಾವನವರ ರಾಜಕೀಯ ಪ್ರಭಾವ ಬಳಿಸಿಕೊಂಡು ಕೃಷ್ಣಾ ನದಿ ಪಾತ್ರದಲ್ಲಿ ಮರಳು ಲೂಟಿ ಮಾಡಿ, ಶಕ್ತಿನಗರದಲ್ಲಿ ಹಾರು ಬೂದಿ ಮಾರಾಟ ಮಾಡಿ ರಾಯಚೂರಿನಲ್ಲಿ 20ಕೋಟಿ ಮೊತ್ತದ ಮನೆ ನಿರ್ಮಿಸಿಕೊಂಡಿದ್ದಾನೆ. ಶ್ರೀನಿವಾಸನಾಯಕ ಹೊಂದಿರುವ ಟ್ರ್ಯಾಕ್ಟರ್, ಟಿಪ್ಪರ್‌ಗಳು, ಅಕ್ರಮ ಮರಳು ದಂಧೆಯ ಸಂಪೂರ್ಣ ಮಾಹಿತಿ ನೀಡುತ್ತೇವೆ.

ದಂಧೆ ಮಾಡುವಾತ ಸುರಪೂರ ತಾಲೂಕಿನ ಸ್ವಗ್ರಾಮ ಚೌಡೇಶ್ವರಹಾಳದಲ್ಲಿ ಮಾಡಿ ನೋಡಲಿ. ಊರು ಬಿಟ್ಟು ಬಂದು ಇಲ್ಲಿ ಮರಳು ಮಾಫಿಯಾದಿಂದ ಬೆದರಿಕೆ, ದಬ್ಬಾಳಿಕೆಗಳಿಂದ ಶಾಂತಿಯುತ ವಾತಾವರಣವನ್ನು ಹದಗೆಡಿಸಿದ್ದಾನೆ ಚಿಂತಲಕುಂಟಿ ಸುರೇಶನಾಯಕಗೆ ನೈತಿಕತೆಯೇ ಇಲ್ಲಾ.ಶಾಸಕರ ಕಚೇರಿಯಲ್ಲಿ ಕಂಪ್ಯೂಟರ್ ಆಪರೇಟರ್ ಮಾಡಿದವರೇ ನಾವು.ನಿಗಮದಿಂದ ಕಾರ್ ಮಂಜೂರು ಮಾಡಿಕೊಂಡು ಇದೀಗ ಮರಳು ದಂಧೆಗೆ ಇಳಿದ್ದಾನೆ ಎಂದು ತಾ.ಪಂ ಮಾಜಿ ಸದಸ್ಯ ಗೋವಿಂದರಾಜ್ ನಾಯಕ ತಿಳಿಸಿದರು.

ಮರಳು ಗಾಡಿಗಳಿಂದ ಹಪ್ತಾ ವಸೂಲಿ ಮಾಡುವ ನೀಚ ಕೆಲಸ ನಾವು ಮಾಡುವದೇ ಇಲ್ಲ.ಖಾಸಗಿ ಕಾಲೇಜಿನಲ್ಲಿ ಉಪನ್ಯಾಸ ಮಾಡಿ ನೂರಾರು ವಿದ್ಯಾರ್ಥಿಗಳಿಗೆ ಬೋಧನೆ ಮಾಡುತ್ತಿರುವೆ.ಸಂಘಟನೆಗಳಲ್ಲಿ ಹೋರಾಟ ಮಾಡಿ ನ್ಯಾಯ ಕೊಡಿಸಿದವ ನಾನು.ಸುಳ್ಳು ಆರೋಪಗಳನ್ನು ಮಾಡುವವರು ನಾಲಿಗೆ ಯನ್ನು ಹಿಡಿತದಲ್ಲಿಟ್ಟಿಕೊಳ್ಳಬೇಕು. ಮರಳು ಮಾಫಿಯಾ ವಿರುದ್ಧ ಹೋರಾಟ ಇನ್ನೂ ತೀವ್ರಗೊಳಿಸುತ್ತೇವೆ ಎಂದು ಜೆಡಿಎಸ್ ಮುಖಂಡ ರಮೇಶ ರಾಮನಾಳ ತಿಳಿಸಿದರು.ಜೆಡಿಎಸ್ ಮಹಿಳಾ ಘಟಕ ಅಧ್ಯಕ್ಷೆ ರೇಣುಕಾ ಮಯೂರ ಸ್ವಾಮಿ ಮಾತನಾಡಿ, ಮಹಿಳೆಯೊಬ್ಬರ ಮೇಲೆ ಸುಳ್ಳು ಆರೋಪ ಮಾಡಿರವ ಶೀನಿವಾಸ ನಾಯಕ ವಿರುದ್ಧ ಮಾನನಷ್ಟ ಪ್ರಕರಣ ದಾಖಲಿಸಲಾಗುವದು.ಮಟ್ಕಾ ಬರೆಯುತ್ತಿದ್ದ ರೇಣುಕಮ್ಮ ಎಂಬುವರನ್ನು ಬಿಟ್ಟು ನನ್ನ ಮೇಲೆ ಸುಳ್ಳು ಪ್ರಕರಣಗಳು ದಾಖಲಾಗಿವೆ.ಕಾರಣ ನ್ಯಾಯಾಲಯದ ಮೊರೆ ಹೋಗಿ,ಆರೋಪಗಳು ನಿರಾಧಾರ ಎಂದು ತೀರ್ಪು ಬಂದಿದೆ. ಕೂಡಲೇ ಶ್ರೀನಿವಾಸ ನಾಯಕ ಮಾಧ್ಯಮದ ಮೂಲಕ ಕ್ಷಮೆಯಾಚಿಸಬೇಕು.ಬಹಿರಂತ ಚರ್ಚೆಗೆ ಬಂದು ದಾಖಲೆಗಳನ್ನು ಪ್ರದರ್ಶಿಸಬೇಕು. ಇಲ್ಲದೇ ಹೋದಲ್ಲಿ ಮಾನನಷ್ಟ ಮೊಕದ್ದಮೆ ಹೂಡಲಾಗುವದು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಜೆಡಿಎಸ್ ಮುಖಂಡರಾದ ಹನುಮಂತ್ರಾಯ ನಾಯಕ ಚಿಂತಲಕುಂಟಿ,ಮಯೂರಸ್ವಾಮಿ, ರಂಗಮ್ಮ ಇರಬಗೇರಾ

## ಗ್ರಾಮೀಣ ಪ್ರದೇಶದಲ್ಲಿ ಜನವರಿ 23ರಂದು ವಿದ್ಯುತ್ ವ್ಯತ್ಯಯ

**ರಾಯಚೂರು,ಜ.22–** ಇಲ್ಲಿನ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ವ್ಯಾಪ್ತಿಗೆ ಬರುವ 33/11 ಕೆವಿ ಇಡಪನೂರು ವಿದ್ಯುತ್ ಉಪ ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ಜನವರಿ 23ರ ಬೆಳಗ್ಗೆ 10 ಗಂಟೆಯಿಂದ ಮಧ್ಯಾಹ್ನ 03 ಗಂಟೆವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ವಿದ್ಯುತ್ ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಾಲ್ಯ ವಿವಾಹ ಶೂನ್ಯ ಸಹಿಷ್ಣುತೆ ಹೊಂದಿರುವಗ್ರಾಮ ಪಂಚಾಯಿತಿಗಳಿಂದ ಪ್ರಶಸ್ತಿಗೆ ಅರ್ಜಿ ಆಹ್ವಾನ

**ರಾಯಚೂರು,ಜ.22–** 2024–25ನೇ ಸಾಲಿನ ಬಾಲ್ಯ ವಿವಾಹ ಶೂನ್ಯ ಸಹಿಷ್ಣುತೆ ಹೊಂದಿರುವ ಗ್ರಾಮ ಪಂಚಾಯಿತಿಗಳಿಗೆ (ಬಾಲ್ಯವಿವಾಹ ಮುಕ್ತ ಗ್ರಾಮ ಪಂಚಾಯತ್) ಪ್ರಶಸ್ತಿ ನೀಡುವ ಕುರಿತು ಶೂನ್ಯ ಸಹಿಷ್ಣುತೆ ಹೊಂದಿರುವ ಗ್ರಾಮ ಪಂಚಾಯತ್‌ಗಳನ್ನು ಗುರುತಿಸಿ ಪ್ರತಿ ಜಿಲ್ಲೆಯಿಂದ ಒಂದು ಗ್ರಾಮ ಪಂಚಾಯತ್‌ಗೆ 25,000 ರೂ.ಗಳಂತೆ ಪ್ರಶಸ್ತಿ ನೀಡಲು ಸಿದ್ಧಪಡಿಸಿರುವ ಮಾನದಂಡಗಳಂತೆ ಜಿಲ್ಲಾ ಮಟ್ಟದಲ್ಲಿ ಆಯ್ಕೆ ಪ್ರಕ್ರಿಯೆ ನಡೆಸಲು ಅನುವಾಗುವಂತೆ ಜಿಲ್ಲಾ ಮಟ್ಟದ ಅಧಿಕಾರಿಗಳನ್ನೊಳಗೊಂಡಂತೆ ಆಯ್ಕೆ ಸಮಿತಿಯನ್ನು ರಚಿಸಲಾಗಿದ್ದು, ಈ ಪ್ರಶಸ್ತಿಗೆ ಅರ್ಹ ಗ್ರಾಮ ಪಂಚಾಯಿತಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಪ್ರಸ್ತಾವನೆಯನ್ನು ಸಲ್ಲಿಸುವ ಗ್ರಾಮ ಪಂಚಾಯತ್‌ಗಳಲ್ಲಿ ಕಳೆದ 03 ವರ್ಷಗಳ ಹಿಂದಿನ 7ರಿಂದ 8 ವರ್ಷಗಳ ಅವಧಿಯಲ್ಲಿ ಗ್ರಾಮ ಪಂಚಾಯಿತಿಗಳು ಕೈಗೊಂಡ ಕ್ರಮಗಳಿಂದ ಹಮ್ಮಿಕೊಂಡ ಜಾಗೃತಿ ಕಾರ್ಯಕ್ರಮಗಳ ಫಲವಾಗಿ 2022–23, 2023–24, 2024–25ನೇ ಸಾಲಿನಲ್ಲಿ ಮೂರು ವರ್ಷಗಳ ಅವಧಿಯಲ್ಲಿ ಯಾವುದೇ ಬಾಲ್ಯವಿವಾಹಗಳು ನಡೆದಿರಬಾರದು ಮತ್ತು ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಶಾಲೆಯಲ್ಲಿ ಮಕ್ಕಳ ರಕ್ಷಣೆಗಾಗಿ ವಿನೂತನ ಕ್ರಮಗಳನ್ನು ಕೈಗೊಂಡು ಬಾಲ್ಯವಿವಾಹ ಶೂನ್ಯ ಸಹಿಷ್ಣುತೆ ಹೊಂದಿರುವ ಗ್ರಾಮ ಪಂಚಾಯ್ತಿಗಳ ಪ್ರಸ್ತಾವನೆಯನ್ನು ಒಂದು ವಾರದೊಳಗೆ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಕಾರ್ಯಾಲಯ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಕಾರ್ಯಾಲಯ ಮ.ನಂ. 1–9–138 ಮಾರೆಮ್ಮ ದೇವಸ್ಥಾನದ ಹತ್ತಿರ, ಆಜಾದ ನಗರ ರಾಯಚೂರಿಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08532–226226ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತಾಲ್ಲೂಕು ಕಾರ್ಯಕ್ರಮ ಸಂಯೋಜಕರ ಹುದ್ದೆಗೆ ಅರ್ಜಿ ಆಹ್ವಾನ

**ರಾಯಚೂರು,ಜ.22–** ಜಿಲ್ಲೆಯ ಸಿಂಧನೂರು ತಾಲೂಕಿನ ತುರ್ವಿಹಾಳ ಶಿಶು ಅಭಿವೃದ್ಧಿ ಯೋಜನಾ ಕಚೇರಿಯಲ್ಲಿ ಪೋಷಣ್ ಅಭಿಯಾನ ಯೋಜನೆಯಡಿ ತಾಲ್ಲೂಕು ಕಾರ್ಯಕ್ರಮ ಸಂಯೋಜಕರ ಒಂದು ಹುದ್ದೆ ಖಾಲಿಯಿದ್ದು, ಈ ಹುದ್ದೆಯು ನೇರಗುತ್ತಿಗೆ ಅಥವಾ ಗೌರವಧನ ಸೇವೆಯ ಆಧಾರದಲ್ಲಿ ನೇಮಕ್ಕೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಅಭ್ಯರ್ಥಿಗಳು ಯಾವುದಾದರೂ ಪದವಿ ಹೊಂದಿರತಕ್ಕದ್ದು, 2 ವರ್ಷದ ತಾಂತ್ರಿಕ ಕ್ಷೇತ್ರದಲ್ಲಿ ಕರ್ತವ್ಯ ನಿರ್ವಹಿಸಿದ ಅನುಭವ ಕಡ್ಡಾಯ ಹೊಂದಿರತಕ್ಕದ್ದು, ಸ್ಥಳೀಯ ಅಭ್ಯರ್ಥಿಗೆ ಆದ್ಯತೆ ನೀಡಲಾಗುವುದು, ನಿಗದಿತ ಅರ್ಜಿ ನಮೂನೆಯನ್ನು ಉಪ ನಿರ್ದೇಶಕರ ಕಚೇರಿ ಹಾಗೂ ಶಿಶು ಅಭಿವೃದ್ಧಿ ಯೋಜನೆಯ ತುರ್ವಿಹಾಳ ಕಚೇರಿಯಲ್ಲಿ ಪಡೆದು ಅರ್ಜಿಗಳನ್ನು ಭರ್ತಿ ಮಾಡಿ ಅಗತ್ಯ ದಾಖಲೆಗಳೊಂದಿಗೆ ಖುದ್ದಾಗಿ ಕಚೇರಿ ಸಮಯದಲ್ಲಿ ಜನವರಿ 31ರ ಸಂಜೆ 05.30ರೊಳಗಾಗಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ರಾಯಚೂರು, ದೂರವಾಣಿ ಸಂಖ್ಯೆ: 08532–295646 ಅಥವಾ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ತುರ್ವಿಹಾಳ ಕಚೇರಿ ಇವರನ್ನು ಸಂಪರ್ಕಿಸಬಹುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಂಚೆ ಕಚೇರಿಗಳಲ್ಲಿ ಇನ್ಮುಂದೆ ಗರಿಷ್ಠ ಅಂಚೆ ಸೇವೆ ಲಭ್ಯ

ರಾಯಚೂರು ಜನವರಿ 22 (ಕರ್ನಾಟಕ ವಾರ್ತೆ): ಗ್ರಾಹಕರ ಅನುಕೂಲಕ್ಕಾಗಿ ರಾಯಚೂರಿನ ಮುಖ್ಯ ಅಂಚೆ ಕಚೇರಿಯಲ್ಲಿ ರಾತ್ರಿ 8 ಗಂಟೆವರೆಗೆ ಹಾಗೂ ಜಿಲ್ಲೆಯ ಸಿಂಧನೂರು, ಮಾನ್ವಿ, ಮಸ್ಕಿ, ಸಿರವಾರ, ಲಿಂಗಸುಗೂರು, ದೇವದುರ್ಗ ಮತ್ತು ಮುದಗಲ್ ಅಂಚೆ ಕಚೇರಿಯಲ್ಲಿ ಸಂಜೆ 5 ಗಂಟೆವರೆಗೆ ಸೇವಾ ಅವಧಿಯನ್ನು ವಿಸ್ತರಿಸಲಾಗಿದೆ.

ಈ ವ್ಯವಸ್ಥೆಯ ಮೂಲಕ ಗ್ರಾಹಕರು ನಗದು ಬಳಕೆ ಇಲ್ಲದೇ, ಸುಲಭವಾಗಿ ಹಾಗೂ ಸುರಕ್ಷಿತವಾಗಿ ಸ್ಪೀಡ್ ಪೋಸ್ಟ್, ಸ್ಪೀಡ್ ನೋಂದಾಯಿತ ಅಂಚೆ, ಪಾರ್ಸೆಲ್ ಸೇವೆ, ಅಂತಾರಾಷ್ಟ್ರೀಯ ಅಂಚೆ ಸೇವೆ, ಎಲ್ಲಾ ರೀತಿಯ ಜವಾಬ್ದಾರಿಯುತ ಲೇಖನಗಳು ಬುಕ್ಕಿಂಗ್ ಸೇವೆಗಳ ಶುಲ್ಕವನ್ನು ಡಿಜಿಟಲ್ ಪಾವತಿ ಮೂಲಕ ಪಾವತಿಸಬಹುದಾಗಿದೆ.

ಈ ನೂತನ ವ್ಯವಸ್ಥೆಯ ಮೂಲಕ ಗ್ರಾಹಕರು ತಮ್ಮ ಮೊಬೈಲ್ ಫೋನ್‌ನಲ್ಲಿರುವ ಯುಪಿಐ / ಫೋನ್‌ಪೇ ಅಪ್ಲಿಕೇಶನ್ ಬಳಸಿ ಸ್ಕ್ಯಾನ್ ಮಾಡಿ ಮತ್ತು ಪಾವತಿಸಿ / ಟ್ಯಾಪ್ ಮಾಡಿ ಮತ್ತು ಪಾವತಿಸಿ ಮೂಲಕ ಕ್ಷಣಾರ್ಧದಲ್ಲಿ ಪಾವತಿ ಮಾಡಬಹುದಾಗಿದೆ.

ಸಾರ್ವಜನಿಕರ ಅನುಕೂಲಕ್ಕಾಗಿ ಭಾರತೀಯ ಪೋಸ್ಟ್ ರಾಯಚೂರು ವಿಭಾಗದ ವ್ಯಾಪ್ತಿಯಲ್ಲಿನ ಎಲ್ಲಾ ಅಂಚೆ ಕಚೇರಿಗಳಲ್ಲಿ ಇದೀಗ ಯುಪಿಐ / ಫೋನ್‌ಪೇ ಡಿಜಿಟಲ್ ಪಾವತಿ ವ್ಯವಸ್ಥೆಯನ್ನು ಯಶಸ್ವಿಯಾಗಿ ಜಾರಿ ತರಲಾಗಿದೆ.

ಅಂಚೆ ಇಲಾಖೆ ಸದಾ ಗ್ರಾಹಕ ಸ್ನೇಹಿ ಸೇವೆಗಳನ್ನು ಒದಗಿಸುವ ಉದ್ದೇಶದಿಂದ ಡಿಜಿಟಲ್ ಇಂಡಿಯಾ ಅಭಿಯಾನದ ಅಂಗವಾಗಿ ಈ ಸೇವೆಯನ್ನು ಪರಿಚಯಿಸಿದೆ. ಸಾರ್ವಜನಿಕರು ಈ ಅವಕಾಶವನ್ನು ಸದುಪಯೋಗಪಡಿಸಿಕೊಂಡು ಗರಿಷ್ಠ ಅಂಚೆ ಸೇವೆಗಳನ್ನು ಬಳಸಿಕೊಳ್ಳುವಂತೆ ರಾಯಚೂರು ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಯಚೂರು ವಿಮಾನ ನಿಲ್ದಾಣ ನಿರ್ಮಾಣ ಕಾಮಗಾರಿ ಸ್ಥಳಕ್ಕೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಭೇಟಿ: ಪರಿಶೀಲನೆ

ಯುವಮಾರ್ಗ ಸುದ್ದಿ



**ರಾಯಚೂರು,ಜ.22–** ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಜನವರಿ 21ರಂದು ಸಂಜೆ ರಾಯಚೂರು ನಗರದ ಹೊರ ವಲಯದ ಯರಮರಸ್ ಬಳಿಯಲ್ಲಿ ನಿರ್ಮಾಣ ಹಂತದಲ್ಲಿರುವ ವಿಮಾನ ನಿಲ್ದಾಣದ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಕಾಮಗಾರಿ ಪ್ರಗತಿಯ ಬಗ್ಗೆ ಸಮಗ್ರ ಪರಿಶೀಲಿಸಿದರು.

ಜಿಲ್ಲಾಧಿಕಾರಿಗಳು, ಮೊದಲಿಗೆ ವಿಮಾನ ನಿಲ್ದಾಣದ ರನ್ ವೇ ಕಾಮಗಾರಿಯ ವೀಕ್ಷಣೆ ನಡೆಸಿ ಕಾಮಗಾರಿಯ ಪ್ರಗತಿಯ ಬಗ್ಗೆ ಕೇಳಿದರು. ಒಟ್ಟು 1.7 ಕಿ ಮೀ ಉದ್ದದ ರನ್ ವೇ ಪೈಕಿ ಇದುವರೆಗೆ 800 ಮೀಟರ್‌ನಷ್ಟು ರನ್ ವೇಗೆ ಮೊರಂ ಹಾಕಿದ್ದು, ಬಾಕಿ ಕಾಮಗಾರಿ ಪ್ರಗತಿ ಹಂತದಲ್ಲಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

ಬಳಿಕ ಜಿಲ್ಲಾಧಿಕಾರಿಗಳು, ಪ್ಯಾಸೆಂಜರ್ ಟರ್ಮಿನಲ್ ಬಿಲ್ಡಿಂಗ್‌ಗೆ ಭೇಟಿ ನೀಡಿ ಪರಿಶೀಲಿಸಿದರು. ಈ ಕಟ್ಟಡಕ್ಕೆ ಈಗಾಗಲೇ ಕಾಲಂ ಮತ್ತು ಚೆತ್ ಹಾಕಿದ್ದು, ಈಗ ರೂಪ್ ಟ್ರಸ್ ಕಾಮಗಾರಿ ಕೈಗೊಳ್ಳಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದರು.

ಇದೆ ವೇಳೆ, ಎಲೆಕ್ಟ್ರಿಕಲ್ ಸಬ್ ಸ್ಟೇಷನ್ ಬಿಲ್ಡಿಂಗ್–1 ಮತ್ತು ಬಿಲ್ಡಿಂಗ್ 2ರ ಕಾಮಗಾರಿಗಳ ಬಗ್ಗೆ ಸಹ ಜಿಲ್ಲಾಧಿಕಾರಿಗಳು ಪರಿಶೀಲಿಸಿದರು. ಈ ಎರಡು ಕಟ್ಟಡಗಳು ಪ್ಲಾಸ್ಟರ್ ಹಂತದಲ್ಲಿರುತ್ತವೆ ಎಂದು ಅಧಿಕಾರಿಗಳು ತಿಳಿಸಿದರು. ಏರ್ ಟ್ರಾಫಿಕ್ ಕಂಟ್ರೋಲ್ ಬಿಲ್ಡಿಂಗ್‌ನ ಚತ್ತಿನ ಕಾಂಕ್ರಿಟ್ ಹಾಕಲಾಗುತ್ತಿದೆ. ಮತ್ತು ಒಟ್ಟು 8 ಕಿ. ಮೀಟರ್ ಪೈಕಿ 5 ಕಿ.ಮೀಟರ್ ಉದ್ದದ ಕಾಂಪೌಂಡ್ ಸುತ್ತಲಿನ ಪೆರಿಮೀಟರ್ ರೋಡ್ ಇದೀಗ ಡಬ್ಲ್ಯೂ ಎಂಎಂ ಹಂತದಲ್ಲಿದ್ದು, ಮುಂದಿನ ದಿನಗಳಲಿ ಡಾಂಬರೀಕರಣ ಮಾಡಲಾಗುವುದು. ಒಟ್ಟು 12 ಸೆಕ್ಯುರಿಟಿ ವಾಚ್ ಟವರ್ ಪೈಕಿ ಇದೀಗ 6 ಟವರ್‌ಗಳ ನಿರ್ಮಾಣ ಕಾರ್ಯವು ಪ್ರಗತಿಯಲ್ಲಿದೆ.

ವಿಮಾನ ನಿಲ್ದಾಣದ ಕಾಂಪೌಂಡ್ ಒಳಭಾಗದಲ್ಲಿನ ಆಂತರಿಕ ರಸ್ತೆಗಳ ನಿರ್ಮಾಣ ಕಾಮಗಾರಿಯು ಸಹ ಪ್ರಗತಿ ಯಲ್ಲಿದೆ. ವಿಮಾನ ನಿಲ್ದಾಣದ ಒಟ್ಟು 8 ಕಿ.ಮೀಟರ್ ಕಾಂಪೌಂಡ್ ನಿರ್ಮಾಣ ಕಾರ್ಯವು ಈಗಾಗಲೇ ಪೂರ್ಣಗೊಂಡಿದೆ ಎಂದು ಅಧಿಕಾರಿಗಳು ಮತ್ತು ಗುತ್ತಿಗೆದಾರರು ಜಿಲ್ಲಾಧಿಕಾರಿಗಳಿಗೆ ಮಾಹಿತಿ ನೀಡಿದರು.

**ಕಾಮಗಾರಿ ವೇಗಗೊಳಿಸಲು ಸೂಚನೆ:** ವಿಮಾನ ನಿಲ್ದಾಣ ಕಾಮಗಾರಿಯನ್ನು ವೇಗಗೊಳಿಸಿ, ಬಾಕಿ ಉಳಿಸಿದ ಎಲ್ಲ ಕಾರ್ಯಗಳನ್ನು ಕಾಲಮಿತಿಯೊಳಗೆ ಪೂರ್ಣಗೊಳಿಸಬೇಕು ಎಂದು ಇದೆ ವೇಳೆ ಜಿಲ್ಲಾಧಿಕಾರಿಗಳು, ಸಂಬಂಧಿಸಿದ ಗುತ್ತಿಗೆದಾರರು ಮತ್ತು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಈ ಸಂದರ್ಭದಲ್ಲಿ ರಾಯಚೂರು ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್, ತಹಸೀಲ್ದಾರ ಸುರೇಶ ವರ್ಮಾ, ಲೋಕೋಪಯೋಗಿ ಇಲಾಖೆಯ ಅಭಿಯಂತರರಾದ ಮಹೇಶ್, ಗುತ್ತಿಗೆದಾರ ಕಂಪನಿ ಕೆಎಂವಿದ ಪ್ರತಿನಿಧಿಗಳಾದ ಪ್ರವೀಣ್ ಹಾಗೂ ಇನ್ನಿತರರು ಇದ್ದರು.

## ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಪತ್ರಕರ್ತರ ಸಭೆ

# ಪತ್ರಕರ್ತರ ಒತ್ತಾಸೆಯಿಂದಲೂ ರಾಯಚೂರು ಉತ್ಸವ–2026 ನಿಗದಿಯಾಗಿದೆ: ನಿತೀಶ್ ಕೆ



ಯುವಮಾರ್ಗ ಸುದ್ದಿ

**ರಾಯಚೂರು,ಜ.22–** ರಾಯಚೂರು ಜಿಲ್ಲೆಯಲ್ಲಿ ರಾಯಚೂರು ಉತ್ಸವ ಆಗಬೇಕು ಎಂದು ರಾಯಚೂರು ಜಿಲ್ಲೆಯ ಎಲ್ಲ ಮಾಧ್ಯಮ ಪ್ರತಿನಿಧಿಗಳು ಮೇಲಿಂದ ಮೇಲೆ ಒತ್ತಾಸೆ ವ್ಯಕ್ತಪಡಿಸಿದ್ದರಿಂದಲು ಸಹ ರಾಯಚೂರು ಜಿಲ್ಲಾ ಉತ್ಸವವನ್ನು ಪ್ರಸಕ್ತ ವರ್ಷ ನಡೆಸಲು ಸಾಧ್ಯವಾಗುತ್ತಿದೆ ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಹೇಳಿದರು. ಜನವರಿ 21ರಂದು ನೂತನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಪತ್ರಕರ್ತರೊಂದಿಗಿನ ಸಭೆಯಲ್ಲಿ ಅವರು ಮಾತನಾಡಿದರು.

ಜಿಲ್ಲೆಯ ಎಲ್ಲ ಜನಪ್ರತಿನಿಧಿಗಳ ಇಚ್ಛಾಸಕ್ತಿ ಮತ್ತು ಪತ್ರಕರ್ತರ ಪ್ರಯತ್ನದಿಂದ 2026ರ ಪ್ರಸಕ್ತ ವರ್ಷದಲ್ಲಿ ನಿಗದಿಯಾದ ಉತ್ಸವಕ್ಕೆ ಬೇರೆ ಬೇರೆ ಕಡೆಗಳಿಂದಲು ಸಹ ಹಣಕಾಸಿನ ಸಹಾಯ ಸಹಕಾರ ಸಿಗುತ್ತಿದೆ. ಈ ಮೂಲಕ ಉತ್ಸವ ಆಗಬೇಕು ಎನ್ನುವ ಸದಾಶಯವು ಎಲ್ಲ ಕಡೆಗಳಿಂದಲೂ ವ್ಯಕ್ತವಾಗುತ್ತಿದೆ ಎಂದು ತಿಳಿಸಿದರು. ಕಡಿಮೆ ಬಜೆಟನಲ್ಲಿ ಸಹ ಅತ್ಯಂತ ವಿಭಿನ್ನ ರೀತಿಯಲ್ಲಿ ಉತ್ಸವದಲ್ಲಿ ನಾನಾ ಕಾರ್ಯಕ್ರಮಗಳನ್ನು ಏರ್ಪಾಡು ಮಾಡಲಾಗುತ್ತಿದೆ ಎಂದು ಅವರು ತಿಳಿಸಿದರು.

ಸಾರ್ವಜನಿಕ ಸಭೆಯಲ್ಲಿ ಭಾಗಿಯಾದ ಜಿಲ್ಲೆಯ ಎಲ್ಲ ಗಣ್ಯ ಮಹನಿಯರಿಂದ, ನಾಗರಿಕರಿಂದ ಸಂಘ ಸಂಸ್ಥೆಗಳ ಪದಾಧಿಕಾರಿಗಳಿಂದ ಕೇಳಿ ಬಂದ ಎಲ್ಲ ಸಲಹೆಗಳನ್ನು ಪರಿಗಣಿಸಿ ಉತ್ಸವದ ಕಾರ್ಯಕ್ರಮಗಳನ್ನು ನಿಗದಿಪಡಿಸಲಾಗಿದೆ. ಪತ್ರಕರ್ತರ ಕೋರಿಕೆಯಂತೆ ಪತ್ರಕರ್ತರಿಗಾಗಿಯೇ ಪ್ರತ್ಯೇಕ ಮಾಧ್ಯಮಗೋಷ್ಠಿ ನಡೆಸಲಾಗುತ್ತದೆ ಎಂದರು.

ಹೊರಗಡೆಯಿಂದ ಬರುವ ಪತ್ರಕರ್ತರಿಗೆ ವಸತಿ ವ್ಯವಸ್ಥೆ ಕಲ್ಪಿಸುತ್ತಿದ್ದೇವೆ. ಪತ್ರಕರ್ತರು ವಿವಿಧೆಡೆ ಸಂಚರಿಸಿ ಸುದ್ದಿ ಸಮನ್ವಯಕ್ಕೆ ಅನುಕೂಲವಾಗುವಂತೆ ಬಸ್ ವ್ಯವಸ್ಥೆ ಮಾಡುತ್ತಿದ್ದೇವೆ. ಮೂರೂ ದಿನಗಳ ಕಾಲ ಪತ್ರಕರ್ತರಿಗೆ ಪ್ರತ್ಯೇಕವಾಗಿ ಊಟದ ವ್ಯವಸ್ಥೆ ಮಾಡುತ್ತಿದ್ದೇವೆ. ಪತ್ರಕರ್ತರಿಗೆ ಪ್ರವೇಸ ಪಾಸುಗಳನ್ನು ನೀಡುತ್ತಿದ್ದೇವೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಈ ಸಂದರ್ಭದಲ್ಲಿ ಪತ್ರಕರ್ತರಾದ ಆರ್ ಗುರುನಾಥ, ಕೆ.ಸತ್ಯನಾರಾಯಣ, ಚನ್ನಬಸವ ಬಾಗಲವಾಡ, ಚಂದ್ರಕಾಂತ ಮಸಾನಿ, ಅರವಿಂದ ಕುಲಕರ್ಣಿ, ಖಾನ್ ಸಾಬ್ ಮೋಮಿನ್, ರಾಚಯ್ಯ ಸ್ವಾಮಿ, ಸಿದ್ದು ಬಿರಾದಾರ, ಸಿದ್ದಯ್ಯ ಸ್ವಾಮಿ ಕುಕನೂರ, ವಾಗೀಶ್ ಪಾಟೀಲ ಹಾಗೂ ಇನ್ನಿತರು ಮಾತನಾಡಿ ಸಭೆಗೆ ನಾನಾ ಸಲಹೆಗಳನ್ನು ನೀಡಿದರು.

ಈ ವೇಳೆ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಮತ್ತು ಪ್ರಚಾರ ಸಮಿತಿಯ ಅಧ್ಯಕ್ಷರಾದ ಸಂತೋಷ ರಾಣಿ, ಸಮಿತಿಯ ಸದಸ್ಯ ಕಾರ್ಯದರ್ಶಿಗಳು ಹಾಗೂ ವಿವಿಧ ಪತ್ರಿಕೆಗಳ ಮತ್ತು ಸುದ್ದಿ ವಾಹಿನಿಗಳ ಪ್ರತಿನಿಧಿಗಳು ಇದ್ದರು.

# ರೈತರ ಜಮೀನಿಗೆ ರಸ್ತೆ ಸಂಪರ್ಕ ಕಲ್ಪಿಸುವಂತೆ ಮನವಿ

ಯುವಮಾರ್ಗ ಸುದ್ದಿ



**ಮಾನ್ವಿ,ಜ.22–** ಪಟ್ಟಣದ ತಹಶೀಲ್ದಾರ್ ಕಚೇರಿಯಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ತಾಲೂಕು ಘಟಕದಿಂದ ತಹಶೀಲ್ದಾರ್ ರವರಿಗೆ ಗ್ರೇಡ್–2 ತಹಶೀಲ್ದಾರ್ ರವರ ಮೂಲಕ ಮನವಿ ಸಲ್ಲಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ತಾಲೂಕು ಘಟಕದ ಅಧ್ಯಕ್ಷರಾದ ಹನುಮೇಶನಾಯಕ ಮಾತನಾಡಿ ತಾಲೂಕಿನ ಹಿರೇಕೊಟ್ನೆಕಲ್ ಗ್ರಾಮದ ಭೂರಹಿತ ಕೃಷಿ ಕಾರ್ಮಿಕರಿಗೆ ವಾಲ್ಮೀಕಿ ಅಭಿವೃದ್ಧಿ ನಿಗಮ ರಾಯಚೂರು ರವರು 19/*/1 ರಲ್ಲಿ ಭೂಮಿಯನ್ನು ಖರೀದಿಸಿ 2016 –17 ರಲ್ಲಿ ಫಲಾನುಭವಿಗಳಿಗೆ ಜಮೀನುಗಳನ್ನು ಹಂಚಿಕೆ ಮಾಡಲಾಗಿದೆ ಆದ್ದರೆ ರೈತರು ಜಮೀನಿಗೆ ಹೋಗುವುದಕ್ಕೆ ರಸ್ತೆ ಇಲ್ಲಾದೆ ಇರುವುದರಿಂದ ರೈತರು ತಮ್ಮ ಜಮೀನುಗಳಲ್ಲಿ ಕೃಷಿ ಮಾಡುವುದಕ್ಕೆ ಸಾಧ್ಯವಾಗುತ್ತಿಲ್ಲ ಕೂಡಲೇ ತಾಲೂಕು ಆಡಳಿತದಿಂದ ಪರಿಶೀಲಿಸಿ ರೈತರ ಜಮೀನುಗಳಿಗೆ ರಸ್ತೆ ಸೌಕರ್ಯ ಕಲ್ಪಿಸಿಕೊಡುವಂತೆ ಕೋರಿದರು.ಹಾಗೂ ಅತಿವೃಷ್ಟಿಯಿಂದ ಬೆಳೆಹಾನಿಯಾಗಿರುವ ರೈತರಿಗೆ ಶೀಘ್ರವೇ ಪರಿಹಾರ ಕಲ್ಪಿಸುವಂತೆ ಕೋರಿದರು.

ಈ ಸಂದರ್ಬದಲ್ಲಿ ತಾ.ಉಪಾಧ್ಯಕ್ಷರಾದ ದಾಹುದ್, ಬಜ್ಜಯ್ಯನಾಯಕ, ಪ್ರ.ಕಾರ್ಯದರ್ಶಿ ವೆಂಕಟೇಶನಾಯಕ, ಸೈಫೀಲ್.ಮೈಬೂಬ್. ಚಾಂದ್ ಪಾಷಾ, ಶಿವಶಂಕರ ನಯಾಕ್, ಕರಿಂಸಾಬ್, ಫಕೀರಮ್ಮ, ರಾಚಮ್ಮ, ಹನುಮಂತ.ದೇವಮ್ಮ,ಲಕ್ಷ್ಮೀ,ಬಸವರಾಜ, ಮಲ್ಲಯ್ಯ,ಏ ಕದಂತ ಸೇರಿದಂತೆ ಇನ್ನಿತರರು ಇದ್ದರು.

# ಕಲಬುರಗಿ, ರಾಯಚೂರು ಜಿಲ್ಲೆಗಳಲ್ಲಿ ರಾಜ್ಯ ಮಾಹಿತಿ ಆಯುಕ್ತರಾದ ಬಿ ವೆಂಕಟ ಸಿಂಗ್ ಪ್ರವಾಸ

**ರಾಯಚೂರು,ಜ.22–** ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠದ ರಾಜ್ಯ ಮಾಹಿತಿ ಆಯುಕ್ತರಾದ ಬಿ.ವೆಂಕಟ್ ಸಿಂಗ್ ಅವರು ಜನವರಿ 26ರಂದು ಕಲಬುರಗಿ ಮತ್ತು ರಾಯಚೂರು ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡಿದ್ದಾರೆ.

ಜನವರಿ 26ರಂದು ಬೆಳಗ್ಗೆ 8 ಗಂಟೆಗೆ ಕಲಬುರಗಿ ಪೀಠದ ಕಚೇರಿಯ ಆವರಣದಲ್ಲಿ ನಡೆಯುವ ಗಣರಾಜ್ಯೋತ್ಸವ ಸಮಾರಂಭದಲ್ಲಿ ಧ್ವಜಾರೋಹಣ ನೆರವೇರಿಸುವರು. ಬಳಿಕ 8.30ಕ್ಕೆ ಅಲ್ಲಿಂದ ನಿರ್ಗಮಿಸಿ ರಾಯಚೂರು ಜಿಲ್ಲೆಯ ಗಬ್ಬೂರ ಗ್ರಾಮಕ್ಕೆ ಬೆಳಗ್ಗೆ 11ಕ್ಕೆ ಆಗಮಿಸಿ ಸುಕ್ಷೇತ್ರ ಗಬ್ಬೂರ ಶ್ರೀ ಬೂದಿಬಸವೇಶ್ವರ ಜಾತ್ರಾ ಮಹೋತ್ಸವ–2026ರ ನಿಮಿತ್ತ ನಡೆಯುವ ಉಚಿತ ದಿಕ್ಷಾ ಅಯ್ಯಾಚಾರ ಹಾಗೂ ಉಚಿತ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ಭಾಗಿಯಾಗುವರು. ಅಲ್ಲಿಂದ ಮಧ್ಯಾಹ್ನ 2 ಗಂಟೆಗೆ ನಿರ್ಗಮಿಸಿ ಕೇಂದ್ರ ಸ್ಥಾನ ಕಲಬುರಗಿಗೆ ಮರು ಪ್ರಯಾಣ ಬೆಳೆಸುವರು ಎಂದು ಆಯುಕ್ತರ ಆಪ್ತ ಸಹಾಯಕರಾದ ಶಿವಾನಂದ ಗು.ಬಿರಾದಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಯಚೂರು ಉತ್ಸವದ ಕಾರ್ಯಕ್ರಮಗಳ ವೇಳಾಪಟ್ಟಿ, ಪೋಸ್ಟರ್, ಬ್ಯಾನರ್ ಬಿಡುಗಡೆ ಮಾಡಿದ ಸಚಿವರಾದ ಎನ್.ಎಸ್.ಬೋಸರಾಜು



ಯುವಮಾರ್ಗ ಸುದ್ದಿ

**ರಾಯಚೂರು,ಜ.22–** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಫೆಬ್ರವರಿ 5ರಿಂದ ಫೆಬ್ರವರಿ 7ರವರೆಗೆ ನಿಗದಿಯಾದ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ–2026ರ ಕಾರ್ಯಕ್ರಮದ ಪ್ರಚಾರದ ಪೋಸ್ಟರ್, ಬ್ಯಾನರ್, ಕಾರ್ಯಕ್ರಮದ ವೇಳಾಪಟ್ಟಿ ಸೇರಿದಂತೆ ಇನ್ನೀತರ ಕಾರ್ಯಕ್ರಮಗಳಿಗೆ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಚಾಲನೆ ನೀಡಿದರು.

ನಗರದ ಮಹಾತ್ಮ ಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಜನವರಿ 21ರಂದು ನಡೆದ ಕಾರ್ಯಕ್ರಮದಲ್ಲಿ ಉತ್ಸವದ ನಿಮಿತ್ತ ಫೆ.5ರವರೆಗೆ ನಿರಂತರ ನಡೆಯುವ ಬೇರೆ ಬೇರೆ ಕಾರ್ಯಕ್ರಮಗಳ ಮಾಹಿತಿಯ ಮತ್ತು ಫೆಬ್ರವರಿ 5, ಫೆಬ್ರವರಿ 6 ಮತ್ತು ಫೆಬ್ರವರಿ 7ರಂದು ಬೆಳಗ್ಗೆಯಿಂದ ಸಂಜೆವರೆಗೆ ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಜಿಲ್ಲಾ ರಂಗಮಂದಿರ, ಜಿಲ್ಲಾ ಕ್ರೀಡಾಂಗಣ, ಮಹಿಳಾ ಸಮಾಜ ಆವರಣ ಸೇರಿದಂತೆ ವಿವಿಧೆಡೆ ನಡೆಯುವ ನಾನಾ ಕಾರ್ಯಕ್ರಮಗಳ ಸಮಗ್ರ ಮಾಹಿತಿಯ ಪೋಸ್ಟರನ್ನು ಸಚಿವರು ಬಿಡುಗಡೆ ಮಾಡಿದರು.

ರಾಯಚೂರು ಉತ್ಸವದ ನಿಮಿತ್ತ ಮಕ್ಕಳ ಹಬ್ಬ–2026ರ ಹಿನ್ನೆಲೆಯ ನಾನಾ ಕಾರ್ಯಕ್ರಮಗಳ ಪೋಸ್ಟರ್, ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಆವರಣದಲ್ಲಿ ಫೆ.5 ರಿಂದ ಫೆ.7ರವರೆಗೆ ನಡೆಯುವ ಫಲ ಪುಷ್ಪ ಪ್ರದರ್ಶನ ಮತ್ತು ಮತ್ಸ ಮೇಳ, ಪಂಚ ಗ್ಯಾರಂಟಿ ಮೇಳ, ಆಹಾರ ಮೇಳ, ಉದ್ಯೋಗ ಮೇಳ, ಕ್ರೀಡಾ ಕೂಟ, ಕರಕುಶಲ, ಕೈಗಾರಿಕೆ, ಪುಸ್ತಕ ಪ್ರದರ್ಶನ ಹಾಗೂ ಚಿತ್ರ ಸಂತೆ, ಸ್ಥಳೀಯ ಕಲಾವಿದರು ಸೇರಿದಂತೆ ರಾಜ್ಯದ ಹೆಸರಾಂತ ಕಲಾವಿದರಿಂದ ನಡೆಯುವ ನಾನಾ ಕಾರ್ಯಕ್ರಮಗಳ ಮಾಹಿತಿಯ ಪೋಸ್ಟರ್, ಫೆ.4 ರಿಂದ ಫೆ.9ರವರೆಗೆ ರಾಯಚೂರು ಜಿಲ್ಲೆಯ ನಾಗರಿಕರಿಗೆ ಬಾನಂಗಳದಿಂದ ರಾಯಚೂರು ವೀಕ್ಷಣೆಗೆ ರಾಯಚೂರು ಬೈ ಸ್ಕೈ ವಿಶೇಷ ಹೆಲಿಕ್ಯಾಪ್ಟರ್ ರೈಡ್ ಕಾರ್ಯಕ್ರಮದ ಮಾಹಿತಿಯ ಪೋಸ್ಟರಗೆ, ಜನವರಿ 28ರಂದು ಕಲ್ಯಾಣ ಕರ್ನಾಟಕ ಭಾಗದ ದೇಹದಾರ್ಢ್ಯ ಬಾಡಿ ಬಿಲ್ಡಿಂಗ್ ಸ್ಪರ್ಧೆಯ ಮಿಸ್ಟರ್ ಕಲ್ಯಾಣ ಕರ್ನಾಟಕ –2026 ಪುರುಷರ ದೇಹದಾರ್ಢ್ಯ ಸ್ಪರ್ಧೆಯ ಪೋಸ್ಟರ್ ಹಾಗೂ ರಾಯಚೂರು ಕೃಷಿ ವಿಶ್ವವಿದ್ಯಾಲಯವು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಮಹಾನಗರ ಪಾಲಿಕೆಯ ಆಶ್ರಯದಲ್ಲಿ ಫೆ.5 ರಿಂದ ಫೆ.7ರವರೆಗೆ ಕೃಷಿ ವಿಶ್ವ ವಿದ್ಯಾಲಯದ ಆವರಣದಲ್ಲಿ ಹಮ್ಮಿಕೊಂಡ ಕೃಷಿ ಮೇಳ 2026ರ ಸಮಗ್ರ ಕೃಷಿ ಸ್ವಾವಲಂಬಿ ಕೃಷಿ ಮೇಳದ ಪ್ರಮುಖ ಆಕರ್ಷಣೀಯ ಮಾಹಿತಿ ಪೋಸ್ಟರನ್ನು ಸಚಿವರು ಇದೆ ವೇಳೆ ಬಿಡುಗಡೆ ಮಾಡಿದರು.

**ಬಲೂನ್ ಹಾರಾಟಕ್ಕೆ ಚಾಲನೆ:** ಎಡೆದೊರೆ ನಾಡು ರಾಯಚೂರು ಉತ್ಸವ ಪ್ರಚಾರದ ವಿಶೇಷ ಆಕರ್ಷನೀಯವಾದ ಬಲೂನ್ ಹಾರಾಟಕ್ಕೆ ಸಚಿವರು ಇದೆ ವೇಳೆ ಜಿಲ್ಲಾ ಕ್ರೀಡಾಂಗಣದ ಆವರಣದಲ್ಲಿ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಈಶ್ವರ್ ಕಾಂದೂ, ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ, ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್, ರೈತ ಸಂಘದ ಅಧ್ಯಕ್ಷರಾದ ಚಾಮರಸ ಪಾಟೀಲ, ರಾಜ್ಯ ನೀತಿ ಆಯೋಗದ ಸದಸ್ಯರಾದ ಡಾ.ರಝಾಕ್ ಉಸ್ತಾದ್, ಮಹಾನಗರ ಪಾಲಿಕೆಯ ಸಮಿತಿಯ ಕಾರ್ಯದರ್ಶಿ ಹಾಗೂ ಜಿಲ್ಲಾ ನೌಕರರ ಸಂಘದ ಅಧ್ಯಕ್ಷರಾದ ಕೃಷ್ಣ ಶಾವಂತಗೇರಿ, ಮಹಾನಗರ ಪಾಲಿಕೆಯ ಉಪ ಆಯುಕ್ತರಾದ ಸಂತೋಷ ರಾಣಿ, ತಹಸೀಲ್ದಾರರಾದ ಸುರೇಶ ವರ್ಮಾ, ಅಮರೇಶ ಬಿರಾದಾರ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅಧಿಕಾರಿ ವೀರೇಶ ನಾಯಕ ಸೇರಿದಂತೆ ಇನ್ನೀತರರು ಉಪಸ್ಥಿತರಿದ್ದರು.

ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಕಾರ್ಯಕ್ರಮದ ಬಗ್ಗೆ ಪ್ರಾಸ್ತಾವಿಕ ಮಾತನಾಡಿದರು. ಆಹ್ವಾನ ಪತ್ರಿಕೆ, ಕರಪತ್ರ, ನೆನಪಿನ ಕಾಣಿಕೆ, ಪಾಸು, ಪ್ರಮಾಣ ಪತ್ರ, ಬ್ಯಾನರ್ ಸಮಿತಿಯ ಅಧ್ಯಕ್ಷರು ಹಾಗೂ ಜಿಲ್ಲಾ ಪಂಚಾಯತನ ಮುಖ್ಯ ಯೋಜನಾಧಿಕಾರಿಗಳಾದ ಡಾ.ಟಿ.ರೋಣಿ ಅವರು ಸ್ವಾಗತಿಸಿದರು. ಮುರಳೀಧರ ಕುಲಕರ್ಣಿ ಅವರು ನಿರೂಪಿಸಿದರು.

ಸಮಾರಂಭದಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ, ನಗರದ ವಿವಿಧ ಸಂಘ ಸಂಸ್ಥೆಗಳ ಪ್ರಮುಖರು, ಪತ್ರಕರ್ತರು ಹಾಗೂ ವಿವಿಧ ಶಾಲಾ ಕಾಲೇಜು ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಸೇರಿ ಕಾರ್ಯಕ್ರಮದ ಮೆರುಗು ಹೆಚ್ಚಿಸಿದರು.

ಆಹ್ವಾನ ಪತ್ರಿಕೆ, ಕರಪತ್ರ, ನೆನಪಿನ ಕಾಣಿಕೆ, ಪಾಸು, ಪ್ರಮಾಣ ಪತ್ರ, ಬ್ಯಾನರ್ ಸಮಿತಿಯ ಅಧ್ಯಕ್ಷರಾದ ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿಗಳು, ಸದಸ್ಯ ಕಾರ್ಯದರ್ಶಿಗಳಾದ ಬಿಸಿಎಂ ಇಲಾಖೆಯ ಅಧಿಕಾರಿಗಳು, ಸದಸ್ಯರಾದ ಉಪ ಪೊಲೀಸ್ ಅಧೀಕ್ಷಕರು, ಮಾನವಿ ಹಾಗೂ ಸಿರವಾರ ತಹಸೀಲ್ದಾರರು, ವೃತ್ತ ಪೊಲೀಸ್ ನಿರೀಕ್ಷಕರು, ನಗರಾಭಿವೃದ್ಧಿ ಕೋಶದ ಗ್ರೇಡ್ 2 ತಹಸೀಲ್ದಾರರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಮತ್ತು ನಿರ್ಮಿತಿ ಕೇಂದ್ರದ ಯೋಜನಾ ವ್ಯವಸ್ಥಾಪಕರು ಈ ಕಾರ್ಯಕ್ರಮಕ್ಕೆ ಅಗತ್ಯ ಏರ್ಪಾಡು ಮಾಡಿದ್ದರು.

# ರಾಯಚೂರು ಉತ್ಸವ: ಜನವರಿ 28ರಂದು ಮಿಸ್ಟರ್ ಕಲ್ಯಾಣ ಕರ್ನಾಟಕ ಬಾಡಿ ಬಿಲ್ಡಿಂಗ್ ಸ್ಪರ್ಧೆ

ಯುವಮಾರ್ಗ ಸುದ್ದಿ

**ರಾಯಚೂರು,ಜ.22–**ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ರಾಯಚೂರು ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ–2026ರ ಅಂಗವಾಗಿ ಜನವರಿ 28ರ ಸಂಜೆ 4 ಗಂಟೆಯಿಂದ 6 ಗಂಟೆವರೆಗೆ ನಗರದ ಮಹಾತ್ಮಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಮಿಸ್ಟರ್ ಕಲ್ಯಾಣ ಕರ್ನಾಟಕ–2026ರ ಪುರುಷರ ದೇಹದಾರ್ಢ್ಯ ಬಾಡಿ ಬಿಲ್ಡಿಂಗ್ ಸ್ಪರ್ಧೆ ಹಮ್ಮಿಕೊಳ್ಳಲಾಗಿದ್ದು, ಆಸಕ್ತ ಬಾಡಿ ಬಿಲ್ಡರಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.




Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H